ಕನ್ನಡ ದಿನಪತ್ರಿಕೆ
24 ಮಾರ್ಚ್ । ರವಿವಾರ
24 MARCH 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 32 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಹೊಸದಾಗಿ ಐವರನ್ನು ನೇಮಿಸಿದ ಎಐಸಿಸಿ

ಬೆಂಗಳೂರು: ಲೋಕಸಭಾ ಚುನಾವಣೆ ಹೊತ್ತಲ್ಲಿ ಕೆಪಿಸಿಸಿಗೆ ಮೇಜರ್ ಸರ್ಜರಿ ಮಾಡಲಾಗಿದೆ. ಕೆಪಿಸಿಸಿ ಕಾರ್ಯಾ ಧ್ಯಕ್ಷರಾಗಿ ಹೊಸದಾಗಿ ಐವರನ್ನು ಎಐಸಿಸಿ ನೇಮಿಸಿದೆ.

ನಾಲ್ವರು ಕಾರ್ಯಾಧ್ಯಕ್ಷರನ್ನು ಬದಲಾವಣೆ ಮಾಡಲಾಗಿದೆ. ಕೆಪಿಸಿಸಿ ನೂತನ ಕಾರ್ಯಾಧ್ಯಕ್ಷರಾಗಿ ತನ್ವೀರ್ ಸೇಠ್, ಜಿ.ಸಿ.ಚಂದ್ರಶೇಖರ್ ವಿನಯ್ ಕುಲಕರ್ಣಿ, ಮಂಜುನಾಥ್ ಭಂಡಾರಿ, ವಸಂತ್ ಕುಮಾರ್ ನೇಮಕ ಮಾಡಲಾಗಿದೆ.

ಸ್ಕೈ ವಾಕರ್ ಪಿಲ್ಲರ್ ಗೆ ಡಿಕ್ಕಿ ಹೊಡೆದ ಸರ್ಕಾರಿ ಬಸ್: ಐದು ಪ್ರಯಾಣಿಕರು ಗಂಭೀರ

ಚಿಕ್ಕಮಗಳೂರು: ಪ್ರಯಾಣಿಕರಿದ್ದ ಕೆಎಸ್ಆರ್ಟಿಸಿ ಬಸ್ಸೊಂದು ಅಪಘಾತಕ್ಕೀಡಾದ ಘಟನೆ ಕಡೂರು ಬಳಿ ನಡೆದಿದೆ. ಅಂಚೆ ಚೋಮನಹಳ್ಳಿ ಬಳಿ ಚಾಲನಕನ ನಿಯಂತ್ರಣ ತಪ್ಪಿ ಸ್ಕೈ ವಾಕರ್ ಪಿಲ್ಲರ್ ಗೆ ಬಸ್ ಡಿಕ್ಕಿ ಹೊಡೆದಿದೆ. ಪರಿಣಾಮ ಬಸ್ಸಿನಲ್ಲಿದ್ದ 5 ಪ್ರಯಾಣಿಕರಿಗೆ ಗಂಭೀರ ಗಾಯವಾಗಿದೆ.

ರಸ್ತೆ ಬದಿಯ ಸ್ಕೈ ವಾಕರ್ ಪಿಲ್ಲರ್ ಗೆ ಬಸ್ ಗುದ್ದಿದೆ. ರಾಷ್ಟ್ರೀಯ ಹೆದ್ದಾರಿ 206ರಲ್ಲಿ ಈ ಘಟನೆ ನಡೆದಿದೆ. ಬಸ್ ಕಡೂರಿನಿಂದ ಅರಸೀಕೆರೆಗೆ ಪ್ರಯಾಣಿಕರನ್ನು ತುಂಬಿ ತೆರಳುತ್ತಿತ್ತು ಎಂದು ತಿಳಿದುಬಂದಿದೆ.

ಗಾಯಾಳುಗಳು ಕಡೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಅತ್ತ ಸ್ಕೈ ವಾಕರ್ ಗೆ ಗುದ್ದಿದ ಪರಿಣಾಮ ಬಸ್ ಸಂಪೂರ್ಣ ಜಖಂ ಆಗಿದೆ. ಕಡೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಪ್ರಕರಣ ಇದಾಗಿದೆ.

ಇಂದು ಬೆಳಗಾವಿಯಲ್ಲಿ ಮೃಣಾಲ ಹೆಬ್ಬಾಳಕರ್ ರ್‍ಯಾಲಿ

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಭಾನುವಾರ ಬೆಳಗಾವಿಯಲ್ಲಿ ರ್‍ಯಾಲಿ ನಡೆಸಿ, ಮಹಾತ್ಮರ ಪುತ್ಥಳಿಗಳಿಗೆ ಗೌರವ ಮಾಲಾರ್ಪಣೆ ಮಾಡಲಿದ್ದಾರೆ.

ಬೆಳಗ್ಗೆ 8 ಗಂಟೆಗೆ ಹಿಂಡಲಗಾ ಗಣಪತಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ರ್‍ಯಾಲಿ ಆರಂಭವಾಗಲಿದೆ. ಅಲ್ಲಿಂದ ಅಂಬೇಡ್ಕರ್ ಗಾರ್ಡನ್ ಗೆ ತೆರಳಿ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಚನ್ನಮ್ಮ ವೃತ್ತದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಪುತ್ಥಳಿಗೆ ಮಾಲಾರ್ಪಣೆ ಮಾಡುವರು.

ನಂತರ ಸಂಗೊಳ್ಳಿ ರಾಯಣ್ಣ ಪುತ್ಥಳಿಗೆ, ಬೋಗಾರ್ ವೇಸ್ ಸಂಭಾಜಿ ಮಹಾರಾಜ್ ಪುತ್ಥಳಿಗೆ, ಶಿವಾಜಿ ಗಾರ್ಡನ್ ಛತ್ರಪತಿ ಶಿವಾಜಿ ಮಹಾರಾಜರ ಪುತ್ಥಳಿಗೆ, ಬಸವೇಶ್ವರ ವೃತ್ತದಲ್ಲಿ ಬಸವೇಶ್ವರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ರಾಜಹಂಸಗಡಕ್ಕೆ ರ್‍ಯಾಲಿ ತೆರಳಲಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರು ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ.

ಬರ ಪರಿಹಾರ ನೀಡದ ಕೇಂದ್ರದ ವಿರುದ್ಧ ಸುಪ್ರೀಂ ಕೋರ್ಟ್ ಗೆ ರಿಟ್ ಅರ್ಜಿ ಸಲ್ಲಿಸಿದ್ದೇವೆ: ಸಿಎಂ

ಬೆಂಗಳೂರು: ತೀವ್ರ ಬರಗಾಲದಿಂದ ತತ್ತರಿಸಿರುವ ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಮಾಡುವಂತೆ ಮೇಲಿಂದ ಮೇಲೆ ಮನವಿ ಮಾಡಿದರೂ ಹಣ ಬಿಡುಗಡೆ ಮಾಡದ ಕೇಂದ್ರ ಸರ್ಕಾರದ ವಿರುದ್ಧ ಸುಪ್ರೀಂ ಕೋರ್ಟ್ ಗೆ ರಿಟ್ ಅರ್ಜಿ ಸಲ್ಲಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಹೇಳಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ನಡೆಸಿ ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಸಿಎಂ, ರಾಜ್ಯದಲ್ಲಿ ತೀವ್ರ ಬರ ಆವರಿಸಿದ್ದರೂ ಕೂಡ ಕೇಂದ್ರ ಸರ್ಕಾರ ಇನ್ನೂ ಬರ ಪರಿಹಾರ ಘೋಷಣೆ ಮಾಡಿಲ್ಲ. ಐದು ತಿಂಗಳ ಕಾಲ ಕಾದರೂ ಇನ್ನೂ ಬಿಡುಗಡೆ ಮಾಡಿಲ್ಲ. ಹೀಗಾಗಿ ಬರ ಪರಿಹಾರ ಕೊಡಿಸುವಂತೆ ಸುಪ್ರೀಂ ಕೋರ್ಟ್ನಲ್ಲಿ ಆರ್ಟಿಕಲ್ 32ರ ಅಡಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ರಿಟ್ ಅರ್ಜಿ ಸಲ್ಲಿಸಿದ್ದೇವೆ ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್ ವಾರದ ರಜೆ ಮುಗಿದ ಬಳಿಕ ಅರ್ಜಿಯನ್ನು ವಿಚಾರಣೆಗೆ ತೆಗೆದುಕೊಳ್ಳಲಿದೆ. ಕೇಂದ್ರ ಸರ್ಕಾರದ ವಿರುದ್ಧ ಕಾನೂನು ಹೋರಾಟ ಮಾಡಲು ನಿರ್ಧರಿಸಿದ್ದೇವೆ ಎಂದು ಸಿಎಂ ಹೇಳಿದರು.

ರಾಜ್ಯದ ಬರಗಾಲದ ಕುರಿತು ಕಳೆದ ವರ್ಷ ಸೆಪ್ಟೆಂಬರ್ ಮತ್ತು ಅಕ್ಟೋಬರ್ ಅವಧಿಯಲ್ಲಿ ರಾಜ್ಯ ಸರ್ಕಾರ ಅಧ್ಯಯನ ನಡೆಸಿತು. ಅಧ್ಯಯನ ಬಳಿಕ ರಾಜ್ಯದಲ್ಲಿ 223 ತಾಲೂಕುಗಳು ಬರಪೀಡಿತ ಎಂದು ಘೋಷಿಸಿದ್ದೇವೆ. ಇದರಲ್ಲಿ 196 ತಾಲೂಕುಗಳು ತೀವ್ರ ಬರಗಾಲದಿಂದ ಕೂಡಿವೆ. ಬರಗಾಲದಿಂದ 48 ಲಕ್ಷ ಹೆಕ್ಟೇರ್ ಪ್ರದೇಶ ಕೃಷಿ, ತೋಟಗಾರಿಕೆ ಬೆಳೆ ನಷ್ಟ ಆಗಿದೆ. ಅಧ್ಯಯನ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದೇವೆ. ಕೇಂದ್ರ ಸರ್ಕಾರಕ್ಕೆ 2023ರ ಸೆಪ್ಟೆಂಬರ್ 23, ನವೆಂಬರ್ 15 ಮತ್ತು ಅಕ್ಟೋಬರ್ 20 ಎಂದು ಮೂರು ಬಾರಿ ಮನವಿ ಸಲ್ಲಿಸಿದ್ದೇವೆ ಎಂದರು.

ಮೊದಲ ಮನವಿ ಕೊಟ್ಟ ಬಳಿಕ, ಒಂದು ವಾರದೊಳಗೆ ಕೇಂದ್ರ ಅಧ್ಯಯನ ತಂಡ ರಾಜ್ಯಕ್ಕೆ ಆಗಮಿಸಿ ಅಧ್ಯಯನ ನಡೆಸಬೇಕು. ಆದ–ರೆ ಕೇಂದ್ರದ ತಂಡ ಅಕ್ಟೋಬರ್ ತಿಂಗಳಲ್ಲಿ ಬಂದಿದ್ದತ್ತು. ಅ.9 ರಿಂದ 14ರ ವರೆಗೆ 10 ಅಧಿಕಾ–ರಿಗಳು ಮೂರು ತಂಡ ಪರಿಶೀಲನೆ ನಡೆಸಿದೆ. ಪರಿಶೀಲನೆ ಬಳಿಕ ತಂಡ ಕೇಂದ್ರ ಸರ್ಕಾರಕ್ಕೆ ವರದಿ ನೀಡಿದೆ. ವರದಿ ನೀಡಿ ಒಂದು ತಿಂಗಳಲ್ಲಿ ಆಯಾ ರಾಜ್ಯಗಳಿಗೆ ಪರಿಹಾರ ಕೊಡಬೇಕು. ಆದರೆ ಇದುವರೆಗೂ ಯಾವುದೇ ಪರಿಹಾರ ಬಿಡುಗಡೆ ಮಾಡಿಲ್ಲ. ಬರ ಪರಿಹಾರವನ್ನು ಕೇಂದ್ರ ಸರ್ಕಾರ ಶೇ.75ರಷ್ಟು ಮತ್ತು ರಾಜ್ಯ ಸರ್ಕಾರ ಶೇ.25ರಷ್ಟು ನೀಡುತ್ತವೆ ಎಂದು ಸಿಎಂ ತಿಳಿಸಿದರು.

ಬರ ಪರಿಹಾರ ವಿಚಾರದಲ್ಲಿ ಕೇಂದ್ರ ಸರ್ಕಾರ ಕಾಯ್ದೆ ಉಲ್ಲಂಘಿ–ಸಿದೆ. ಕಾನೂನು ಮಾಡೋದು ಸಂವಿಧಾನದ ಅಡಿಯಲ್ಲಿ ಅಲ್ವಾ? ನಿಯಮ ಮೀರಿದರೇ ಕೋರ್ಟ್ನಲ್ಲಿ ನ್ಯಾಯ ಕೇಳಬೇಕು ಅಲ್ವಾ? ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನ್ಯಾಯ ಆಗಿದೆ. ಕೇಂದ್ರ ಸರ್ಕಾರದಿಂದ ಎಲ್ಲವೂ ನಿಯಮ ಬಾಹಿರ ಆಗಿದೆ. ರೈತರಿಗೆ ಕಷ್ಟ ಇದೆ ಎಂದು ನಾವು ತಾತ್ಕಾಲಿಕವಾಗಿ 2,000 ರೂ. ಕೊಟ್ಟಿದ್ದೇವೆ. 33 ಲಕ್ಷದ 44 ಸಾವಿರ ರೈತರಿಗೆ 650 ಕೋಟಿ ಬಿಡುಗಡೆ ಮಾಡಿದ್ದೇವೆ. ಬರಗಾಲ ನಿಭಾಯಿಸುವ ಕೆಲಸವನ್ನ ನಾವು ಯಶಸ್ವಿಯಾಗಿ ಮಾಡಿದ್ದೇವೆ ಎಂದರು.

ಕಾಂಗ್ರೆಸ್ ಪ್ರಚಾರಕ್ಕೆ ನಟಿ ರಮ್ಯಾ ಎಂಟ್ರಿ

ಬೆಂಗಳೂರು: ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪರ ಪ್ರಚಾರ ಮಾಡಲು ಸ್ಟಾರ್ ಕಾಂಪೈನರ್ ಗಳ ಲಿಸ್ಟ್ ರೆಡಿಯಾಗಿದೆ. ಈಗ ಸ್ಟಾರ್ ಕಾಂಪೈನರ್ ಗಳ ಪಟ್ಟಿಯಲ್ಲಿ ರಮ್ಯಾ ಹೆಸರೂ ಇದೆ ಎನ್ನಲಾಗಿದೆ.

ನಟಿ ರಮ್ಯಾ ಈ ಹಿಂದೆ ಕಾಂಗ್ರೆಸ್ ನಲ್ಲಿ ಸಕ್ರಿಯರಾಗಿದ್ದವರು, ಸಂಸದರಾಗಿಯೂ ಆಯ್ಕೆಯಾಗಿದ್ದರು. ಆದರೆ ಅದಾದ ಬಳಿಕ ರಮ್ಯಾ ರಾಜಕೀಯ, ಸಿನಿಮಾದಿಂದ ದೂರವುಳಿದಿದ್ದರು. ಈ ನಡುವೆ ಕಳೆದ ವಿಧಾನಸಭೆ ಚುನಾವಣೆ ವೇಳೆ ಸ್ಟಾರ್ ಪ್ರಚಾರಕಿಯಾಗಿದ್ದರು.

ಇದೀಗ ರಮ್ಯಾರನ್ನು ಮಂಡ್ಯ ಮತ್ತು ಮೈಸೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಪ್ರಚಾರಕ್ಕೆ ಕರೆತರಲು ಪ್ರಯತ್ನ ನಡೆಸಲಾಗಿದೆ. ರಮ್ಯಾಗೆ ಮಂಡ್ಯ, ಮೈಸೂರು ಭಾಗದಲ್ಲಿ ಜನ ಬೆಂಬಲವಿದೆ. ಯುವ ಮತದಾರರನ್ನು ಸೆಳೆಯಲು ಅವರು ಸೂಕ್ತ ಎಂಬ ಕಾರಣಕ್ಕೆ ಅವರನ್ನು ಸ್ಟಾರ್ ಪ್ರಚಾರಕರ ಪಟ್ಟಿಗೆ ಸೇರಿಸಲಾಗಿದೆ.

ರಮ್ಯಾ ಈ ಮೊದಲು ಮಂಡ್ಯದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿಯಲಿದ್ದಾರೆ ಎಂಬ ಸುದ್ದಿಗಳಿತ್ತು. ಆದರೆ ರಮ್ಯಾ ಬದಲು ಸ್ಟಾರ್ ಚಂದ್ರುಗೆ ಮಣೆ ಹಾಕಲಾಯಿತು. ಇದೀಗ ಚುನಾವಣೆಗೆ ಸ್ಪರ್ಧಿಸದೇ ಇದ್ದರೂ ಪ್ರಚಾರಕಿಯಾಗಿ ಬಳಸಿಕೊಳ್ಳಲು ಪಕ್ಷ ತೀರ್ಮಾನಿಸಿದೆ ಎನ್ನಲಾಗಿದೆ.

ಧಾರವಾಡ: ಕೊಟ್ಟಿಗೆಗೆ ನುಗ್ಗಿ ಕರುವನ್ನು ಕೊಂದ ಚಿರತೆ; ನಿವಾಸಿಗಳಲ್ಲಿ ಆತಂಕ

ಧಾರವಾಡ: ತಾಲ್ಲೂಕಿನ ಮನಸೂರಿನ ಕರಿಯಮ್ಮ ಗುಡಿ ಸಮೀಪದ ಕೊಟ್ಟಿಗೆಗೆ ಚಿರತೆ ನುಗ್ಗಿ ಹಸುವಿನ ಕರುವನ್ನು ಕೊಂದಿದೆ. ಇದು ಗ್ರಾಮಸ್ಥರಲ್ಲಿ ಆತಂಕ ಮೂಡಿದೆ. ಕರ್ನಾಟಕ ವಿಶ್ವವಿದ್ಯಾಲಯ ಪಕ್ಕದ ಶಾಂಭವಿ ನಗರದಲ್ಲಿ ಸ್ಥಳೀಯರೊಬ್ಬರಿಗೆ ಬುಧವಾರ ಬೆಳಿಗ್ಗೆ ಚಿರತೆ ಕಾಣಿಸಿಕೊಂಡಿದ್ದು, ಹಾಸ್ಟೆಲ್ ನಲ್ಲಿ ವಾಸಿಸುವ ವಿದ್ಯಾರ್ಥಿಗಳು ಭಯದ ಆತಂಕದಲ್ಲಿ ಕಾಲ ಕಳೆಯುವಂತಾಗಿದೆ. ವಿಶ್ವವಿದ್ಯಾನಿಲಯದ ಪಕ್ಕದ ಪ್ರದೇಶದಲ್ಲಿ ಚಿರತೆ ಕಾಣಿಸಿಕೊಂಡಿದೆ ಎಂಬ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಅರಣ್ಯಾಧಿಕಾರಿಗಳು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿದರು. ಆದರೆ ಅವರಿಗೆ ಚಿರತೆ ಚಲನವಲನ ಸ್ಪಷ್ಟವಾಗಿ ಕಂಡಿಲ್ಲ. ವಿಶ್ವವಿದ್ಯಾನಿಲಯದ ಬಳಿ ಕಾಣಿಸಿಕೊಂಡ ಚಿರತೆ ಗುಡ್ಡಗಾಡು ಪ್ರದೇಶವಾದ ಮನ್ಸೂರ್ ಗ್ರಾಮದ ಕಡೆಗೆ ತೆರಳಿರಬಹುದು ಎಂದು ಅರಣ್ಯಾಧಿಕಾರಿ ಶಂಕಿಸಿದ್ದಾರೆ. ಚಿರತೆ ಹಳಿಯಾಳ ಅರಣ್ಯದಿಂದ ಆಹಾರ ಮತ್ತು ನೀರು ಹುಡುಕಿಕೊಂಡು ಬಂದಿರಬಹುದು ಎಂದು ಹೇಳಿದ್ದಾರೆ. ಕರುವನ್ನು ಕಳೆದುಕೊಂಡ ರೈತನಿಂದ ನಮಗೆ ದೂರು ಬಂದಿದ್ದು, ಪರಿಹಾರ ನೀಡುವ ಪ್ರಕ್ರಿಯೆ ನಡೆಯುತ್ತಿದೆ. ಯಾವುದೇ ರೀತಿಯ ಅಹಿತಕರ ಘಟನೆಗಳನ್ನು ತಪ್ಪಿಸಲು ನಾವು ಸಿಬ್ಬಂದಿಯನ್ನು ನಿಯೋಜಿಸಿದ್ದೇವೆ ಮತ್ತು ಈ ಪ್ರದೇಶದಲ್ಲಿ ಚಿರತೆ ಪತ್ತೆಹಚ್ಚಲು ಡ್ರೋನ್‌ಗಳನ್ನು ಸಹ ಬಳಸಲಾಗುತ್ತಿದೆ.

ಪಕ್ಷದಿಂದ ಉಚ್ಚಾಟನೆ: ಜೆಡಿಎಸ್ ವಿರುದ್ಧ ಸಿಎಂ ಇಬ್ರಾಹಿಂ ಸಲ್ಲಿಸಿದ್ದ ಮೊಕದ್ದಮೆ ವಜಾ ಮಾಡಿದ ಕೋರ್ಟ್

ಬೆಂಗಳೂರು: ತಮ್ಮನ್ನು ಪಕ್ಷದಿಂದ ಅಮಾನತುಗೊಳಿಸಿ ಉಚ್ಚಾಟನೆ ಮಾಡಿರುವ ಜೆಡಿಎಸ್ ನಿರ್ಧಾರದ ವಿರುದ್ಧ ರಾಜ–ಕಾರಣಿ ಸಿಎಂ ಇಬ್ರಾಹಿಂ ಅವರು ಸಲ್ಲಿಸಿದ್ದ ಮೊಕದ್ದಮೆಯನ್ನು ನಗರದ ನ್ಯಾಯಾಲಯ ತಿರಸ್ಕರಿಸಿದೆ.

ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಸ್ಥಾನದಿಂದ ತಮ್ಮನ್ನು ಉಚ್ಚಾಟನೆ ಮಾಡಿರುವ ಕ್ರಮ ಪ್ರಶ್ನಿಸಿ, ಸಿಎಂ ಇಬ್ರಾಹಿಂ ಅವರು ಸಲ್ಲಿಸಿದ್ದ ಅರ್ಜಿಯನ್ನು ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯ ವಜಾ ಮಾಡಿದೆ. ಪಕ್ಷ ವಿರೋಧಿ ಚಟುವಟಿಕೆಗಳ ಹಿನ್ನೆಲೆಯಲ್ಲಿ ಜೆಡಿ–ಎಸ್ ಪಕ್ಷದಿಂದ ಇಬ್ರಾಹಿಂ ಅವರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಎಚ್.ಡಿ.ದೇವೇಗೌಡ

ಅವರು ಉಚ್ಚಾಟನೆ ಮಾಡಿದ್ದರು.

ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಎಚ್.ಡಿ.ದೇವೇಗೌಡ ಅವರು ನಿಯಮಗಳಿಗೆ ವಿರುದ್ಧವಾಗಿ ತಮ್ಮನ್ನು ರಾಜ್ಯಾಧ್ಯಕ್ಷ ಹುದ್ದೆಯಿಂದ ವಜಾ ಮಾಡಿದ್ದರು ಎಂದು ಇಬ್ರಾಹಿಂ ಅವರು ದೂರಿದ್ದರು. ಆದರೆ, ಅರ್ಜಿಯನ್ನು ಕೋರ್ಟ್ ಶುಕ್ರವಾರ ವಜಾ ಮಾಡಿದೆ.

ಇದಕ್ಕೂ ಮೊದಲು, ಜನವರಿ 2024 ರಲ್ಲಿ, ಸಿಟಿ ಸಿವಿಲ್ ನ್ಯಾಯಾಲಯವು ಪಕ್ಷವು ಸಲ್ಲಿಸಿದ ಮೊಕದ್ದಮೆಯಲ್ಲಿ ಸಿಎಂ ಇಬ್ರಾಹಿಂ ಮತ್ತು ಇತರರು ಜೆಡಿಎಸ್‌ನ ಹೆಸರು, ಲೋಗೋ, ಚಿಹ್ನೆ, ಲೆಟರ್‌ಹೆಡ್ ಇತ್ಯಾದಿಗಳನ್ನು ಬಳಸದಂತೆ ನಿರ್ಬಂಧಿಸಿತ್ತು.

ಇಬ್ರಾಹಿಂ ಪಕ್ಷ ವಿರೋಧಿ ಚಟುವಟಿ–ಕೆಯಲ್ಲಿ ತೊಡಗಿದ್ದರು ಎಂಬುದು ಪಕ್ಷದ ಆರೋಪವಾಗಿತ್ತು. ಅವರು ಅಕ್ಟೋಬರ್ 16, 2023 ರಂದು ಸಮಾನಾಂತರ ಸಭೆಗಳನ್ನು ನಡೆಸಿದರು ಮತ್ತು ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದೊಂದಿಗೆ ಜೆಡಿಎಸ್ ಮೈತ್ರಿಯನ್ನು ವಿರೋಧಿಸಿದರು.

ಮಹಾರಾಷ್ಟ್ರ ಸಿಎಂಗೆ ಸಿದ್ದರಾಮಯ್ಯ ಪತ್ರ

ಬೆಂಗಳೂರು: ರಾಜ್ಯದಲ್ಲಿ ತೀವ್ರ ಬರಗಾಲವಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ತೀವ್ರ ನೀರಿನ ಸಮಸ್ಯೆ ಎದುರಾಗಿದೆ. ಈ ನಿಟ್ಟಿನಲ್ಲಿ ಉಜನಿ ಜಲಾಶಯದಿಂದ ಭೀಮಾ ನದಿಗೆ ಹಾಗೂ ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ ನೀರು ಹರಿಸುವಂತೆ ಮಹಾರಾಷ್ಟ್ರ ಮುಖ್ಯಮಂತ್ರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.ತೀವ್ರ ಬರ ಎದುರಿಸುತ್ತಿರುವ ಕಲಬುರಗಿ ಜಿಲ್ಲೆ ಸೇ–ರಿದಂತೆ ಉತ್ತರ ಕರ್ನಾಟಕದ ಬೆಳಗಾವಿ, ವಿಜಯಪುರ, ಬಾಗಲಕೋಟ, ಯಾದಗಿರಿ ಹಾಗೂ ರಾಯಚೂರು ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ.

ಇದರ ಭಾಗವಾಗಿಯೇ ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ಅವರಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದಾಗಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದು ಈಗಿರುವ ಪ್ರಮಾಣದಿಂದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಆಗುವುದಿಲ್ಲ. ಹಾಗಾಗಿ,

ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ 2 ಖಿಒಅ ಹಾಗೂ ಉಜನಿ ಜಲಾಶಯದಿಂದ ಭೀಮಾ ನದಿಗೆ 1 TMC ನೀರು ಹ–ರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರದಲ್ಲಿ ತಿಳಿಸಿದ್ದಾರೆ. ಸಿಎಂ ಬರೆದ ಪತ್ರಕ್ಕೆ ಸ್ಪಂದನೆ ಸಿಗದಿರುವ ಹಿನ್ನೆಲೆಯಲ್ಲಿ ಅಧಿಕಾ–ರಿಗಳೊಂದಿಗೆ ಚರ್ಚೆ ನಡೆಸಿ ಮಹಾರಾಷ್ಟ್ರದ ಅಧಿಕಾರಿಗಳ ಮೇಲೆ ನಿರಂತರ ಒತ್ತಡ ತರಲಾಗುತ್ತಿದೆ. ಕಲಬುರಗಿ ಜಿಲ್ಲೆ ಹಾಗೂ ಈಗ ತೀವ್ರ ಕುಡಿಯುವ ನೀರಿನ ಸಮಸ್ಯೆ ಎದು–ರಿಸುತ್ತಿರುವ ಅಫಜಲಪುರ ತಾಲೂಕಿನಲ್ಲಿನ ಸಮಸ್ಯೆ ಬಗೆಹರಿಸಲು ಭೀಮಾ ನದಿಗೆ ನೀರು ಹರಿಸಲು ಪ್ರಯತ್ನ ನಡೆದಿದೆ.

ಈ ನಡುವೆ, ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯದಿಂದ ಸೋನ್ನ ಬ್ಯಾರೆಜಿಗೆ ನೀರು ತರುವ ಪ್ರಯತ್ನ ಕೂಡ ನಡೆದಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕುಡಿಯುವ ನೀರಿಗಾಗಿ ಹಣದ ಕೊರತೆ ಇಲ್ಲ: ಪ್ರಿಯಾಂಕ್ ಖರ್ಗೆಕುಡಿಯುವ ನೀರಿಗಾಗಿ ಹಣದ ಕೊರತೆ ಇಲ್ಲ ಪಿ.ಡಿ. ಖಾತೆಯಲ್ಲಿ 16 ಕೋಟಿ ರೂಪಾಯಿ ಹಾಗೂ ಗ್ರಾಮೀಣ ಕುಡಿಯುವ ನೀರು ವಿಭಾಗದ ಖಾತೆಯಲ್ಲಿ 127 ಕೋಟಿ ರೂಪಾಯಿ ಅನುದಾನ ಲಭ್ಯವಿದೆ. ಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಎನ್‌ಡಿಆರ್‌ಎಫ್ ಅಡಿಯಲ್ಲಿ ಬಾಡಿಗೆ ಬೋರ್ ವೆಲ್ ಹಾಗೂ ಟ್ಯಾಂಕರ್ ಮೂಲಕ ನೀರು ಒದಗಿಸಲಾಗುವುದು ಎಂದಿದ್ದಾರೆ

ಲೋಕಸಭಾ ಚುನಾವಣೆ: ನೋಡಲ್ ಅಧಿಕಾರಿಗಳ ಸಭೆ

ಚೆಕ್ ಪೋಸ್ಟ್ ಗಳಲ್ಲಿ ತೀವ್ರ ನಿಗಾ ವಹಿಸಲು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ್ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ, ಹಣ ಮತ್ತಿತರ ವಸ್ತುಗಳ ಸಾಗಾಣಿಕೆ ತಡೆಗಟ್ಟುವ ನಿಟ್ಟಿನಲ್ಲಿ ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್ ಗಳಲ್ಲಿ ತೀವ್ರ ನಿಗಾವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ(ಮಾ.23) ನಡೆದ ಸಹಾಯಕ ಚುನಾವಣಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ 65 ಚೆಕ್ ಪೋಸ್ಟ್ ಗಳಲ್ಲಿ ನಿಯೋಜಿಸಲಾಗಿರುವ ತಂಡಗಳು ಸಕ್ರಿಯವಾಗಿ ಕೆಲಸ ಮಾಡಬೇಕು.

ಚುನಾವಣೆಯನ್ನು ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸಲು ಅನುಕೂಲವಾಗುವಂತೆ ಪ್ರತಿಯೊಂದು ತಂಡ ಮತ್ತು ನೋಡಲ್ ಅಧಿಕಾರಿಗಳು ತಮ್ಮ ಹೊಣೆಗಾರಿಕೆಗಳನ್ನು ಅರಿತುಕೊಂಡು ಕೆಲಸ ಮಾಡಬೇಕು.

ಜಿಲ್ಲೆಯ ಎಲ್ಲ ಎಫ್.ಎಸ್.ಟಿ. ತಂಡಗಳು ಚುರುಕಿನಿಂದ ಕೆಲಸ ಮಾಡಬೇಕು. ಪ್ರತಿ ತಂಡಕ್ಕೆ ನೀಡಲಾಗಿರುವ ವಾಹನಗಳಿಗೆ ಜಿಪಿಎಸ್ ಅಳವಡಿಸಿರುವುದರಿಂದ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು ನಿರಂತರವಾಗಿ ತಂಡಗಳ ಮೇಲೆ ನಿಗಾ ವಹಿಸಬೇಕು ಎಂದು ನಿತೇಆ್ ಪಾಟೀಲ ಸೂಚನೆ ನೀಡಿದರು. ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಸಹಾಯಕ ಚುನಾವಣಾಧಿಕಾರಿಗಳಾದ ಶಕೀಲ್ ಅಹ್ಮದ್, ಸತೀಶ್ ಕುಮಾರ್, ನೋಡಲ್ ಅಧಿಕಾರಿಗಳಾದ ನಜ್ಮಾ ಪೀರಜಾದೆ, ವಿಜಯಕುಮಾರ್, ಶಿವನಗೌಡ ಪಾಟೀಲ, ಶ್ರೀಶೈಲ್ ಕಂಕಣವಾಡಿ, ನಾಗರಾಜ್, ಶ್ರೀನಿವಾಸ್, ಗುರುನಾಥ ಕಡಬೂರ, ಶಿರೀಷ್ ಕಡಗದಕೈ, ಮಹೇಶ್ ತುಬಾಕಿ ಮತ್ತಿತರರು ಉಪಸ್ಥಿತರಿದ್ದರು.

629.94 ಲೀ. ಮದ್ಯ, ರೂ.26 ಲಕ್ಷ ನಗದು, ಗಾಂಜಾ ವಶ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಜಾರಿಯಾಗಿದ್ದು, ಶುಕ್ರವಾರದಂದು ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಅನಧೀಕೃತವಾಗಿ ಸಾಗಿಸುತ್ತಿದ್ದ 629.94 ಲೀಟರ್ (ರೂ.2,53,141 ಮೌಲ್ಯ) ಮದ್ಯ, ರೂ.26 ಲಕ್ಷ ನಗದು ಹಣ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಸಂಡೂರು ತಾಲ್ಲೂಕಿನ ಚೋರನೂರು ಬಳಿ ಅಕ್ರಮವಾಗಿ ಸಾಗಾಣೆ ಮಾಡುತ್ತಿದ್ದ 130 ಗ್ರಾಂ (ರೂ.4500 ಮೌಲ್ಯದ) ಗಾಂಜಾ ಮತ್ತು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ರೂ.26 ಲಕ್ಷ ನಗದು ಹಣ, ದ್ವಿಚಕ್ರ ವಾಹನ ವಶಪಡಿಸಿಕೊಳ್ಳಲಾಗಿದೆ.

ಅಬಕಾರಿ ಪೊಲೀಸ್ ಅಧಿಕಾರಿಗಳಿಂದ 500.87 ಲೀಟರ್ (ರೂ.195960 ಮೌಲ್ಯ) ಮದ್ಯ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳಿಂದ 129.07 ಲೀಟರ್ (ರೂ.57181 ಮೌಲ್ಯ) ಮದ್ಯ ಮತ್ತು ಒಂದು ವಾಹನ (ರೂ.50 ಸಾವಿರ ಮೌಲ್ಯ) ವಶಪಡಿಸಿಕೊಳ್ಳಲಾಗಿದೆ. ಈವರೆಗೆ ಒಟ್ಟು 44 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಧಾರವಾಡ ಲೋಕಸಭಾ ಚುನಾವಣೆ- 2024

ಮುಕ್ತ ಮತ್ತು ನ್ಯಾಯೋಚಿತ ಚುನಾವಣೆ ಜರುಗಿಸಲು ಅಗತ್ಯವಾದ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ: ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ

ಧಾರವಾಡ: ಒಟ್ಟು 1719 ರೌಡಿ ಜನರ ಪೈಕಿ 1355 ಜನರ ಮೇಲೆ ಮುಂಜಾಗೃತ ಕ್ರಮ ಜರುಗಿಸಲಾಗಿದೆ. ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಒಟ್ಟು 88 ವಲ್ನರೇಬಲ್ ಪ್ರದೇಶಗಳನ್ನು ಗುರುತಿಸಲಾಗಿದ್ದು, ಚುನಾವಣಾ ಅಪರಾಧಗಳಲ್ಲಿನ ಆರೋಪಿತರ ಮೇಲೆ ಸಿ.ಆರ್ಪಿ.ಸಿ. ಅಡಿಯಲ್ಲಿ ಮುಂಜಾಗೃತ ಕ್ರಮ ಜರುಗಿಸಲಾಗಿದೆ ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅವಳಿನಗರ ವಾಪ್ತಿಯಲ್ಲಿನ 88 ವಲ್ನರೇಬಲ್ ಪ್ರದೇಶಗಳಲ್ಲಿ ಭಯಪಡಿಸುವ ಅಥವಾ ಅನಗತ್ಯ ಪ್ರಭಾವ ಬಿರುವ ಒಟ್ಟು 12 ವ್ಯಕ್ತಿಗಳನ್ನು ಗುರುತಿಸಿದ್ದು ಅವರ ಮೇಲೆ ಸಿ.ಆರ್ಪಿ.ಸಿ ಅಡಿಯಲ್ಲಿ ಮುಂಜಾಗೃತ ಕ್ರಮ ಜರುಗಿಸಲಾಗಿದೆ. ದೈಹಿಕ ಅಪರಾಧ ಪ್ರಕರಣಗಳಿಗೆ ಸಂಭಂದಿಸಿದ ಜಾಮೀನು ರಹಿತ ವಾರೆಂಟುಗಳನ್ನು ಜಾರಿ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಒಟ್ಟು 955 ಪರವಾಣಿಗೆ ಹೊಂದಿದ ಆಯುಧಗಳಿದ್ದು, ಅವುಗಳಲ್ಲಿನ 726 ಆಯುಧಗಳನ್ನು ಜಮಾ ಮಾಡಿಕೊಳ್ಳಲಾಗಿದೆ. ಉಳಿದವುಗಳನ್ನು ಮಾರ್ಚ25, 2024 ರ ಒಳಗಾಗಿ ಜಮಾ ಮಾಡಲು ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

ಲೋಕಸಭಾ ಚುನಾವಣೆ ಬಂದೋಬಸ್ತಗಾಗಿ ಸಿ.ಐ.ಎಸ್.ಎಫ್. ಒಂದು ಕಂಪನಿ ಹುಬ್ಬಳ್ಳಿ-ಧಾರವಾಡ ನಗರಕ್ಕೆ ಬಂದಿದ್ದು, ಪ್ರತಿ ದಿನ ಒಂದೊಂದು ಠಾಣೆಗಳಲ್ಲಿನ ವಲ್ನರೇಬಲ್ ಪ್ರದೇಶಗಳಿಗೆ ಠಾಣಾ ಅಧಿಕಾರಿ ಮತ್ತು ಸಿಬ್ಬಂದಿಯೊಂದಿಗೆ ಭೇಟಿ ನೀಡಿ ರೂಟ್ ಮಾರ್ಚ ಮಾಡಿ ಜನರಲ್ಲಿ ಆತ್ಮ ವಿಶ್ವಾಸ ಮತ್ತು ಧೈರ್ಯ ತುಂಬುವ ಕೆಲಸ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಚುನಾವಣೆಗೆ ಸಂಭಂದಿಸಿದಂತೆ ಮತ್ತು ಮತದಾನದ ದಿನ ಮತಗಟ್ಟೆಗಳ ಭದ್ರತೆ ಕುರಿತು ಸಿಬ್ಬಂದಿಗಳ ನಿಯೋಜನೆ ಕುರಿತು ತಯಾರಿ ಮಾಡಿಕೊಳ್ಳಲಾಗಿದೆ. ಮುಕ್ತ ಮತ್ತು ನ್ಯಾಯೋಚಿತ ಚುನಾವಣೆ ಜರುಗಿಸುವ ಕುರಿತು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ರೇಣುಕಾಚಾರ್ಯರ ಜಯಂತಿ ಆಚರಣೆ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶನಿವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಅವರು ಶ್ರೀ ರೇಣುಕಾಚಾರ್ಯ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಗಣ್ಪರ್ಪಣೆ ಸಲ್ಲಿಸಿ, ನಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಮಾಜದ ಒಳಿತಿಗಾಗಿ ಜಾತಿ, ಧರ್ಮ, ಮತ ಮತ್ತು ಯಾವುದೇ ಪ್ರಕಾರದ ಮೇಲು, ಕೀಳು ಅನ್ನದೆ ಸಮಾಜದಲ್ಲಿ ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣಬೇಕು. ಮಹಾತ್ಮರ ಬದುಕು ನಮಗೆ ಜೀವನ ಮಾರ್ಗ ತೋರುತ್ತದೆ ಎಂದರು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಸರಳವಾಗಿ ಆಚರಿಸಿದ ಈ ಜಯಂತಿ ಕಾರ್ಯಕ್ರಮದಲ್ಲಿ ಹಿರಿಯರಾದ ಸರೋಜಾ ಪಾಟೀಲ, ಬಂಗಾರೇಶ ಹಿರೇಮಠ ಹಾಗೂ ಇತರರು ಮಾತನಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಶಯ ನಿರ್ದೇಶಕ ಕುಮಾರ ಬೆಕ್ಕೆರಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಗಣ್ಯರು,ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

25 ಲಕ್ಷ ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ಮಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಲೋಕಾಯುಕ್ತ ಬಲೆಗೆ

ಮಂಗಳೂರು: ಮಂಗಳೂರು ಅಭಿವೃದ್ಧಿ ಪ್ರಾಧಿಕಾರ(ಮುಡಾ)ದ ಆಯುಕ್ತ ಮನ್ಸೂರ್ ಅಲಿ ಅವರು ಶನಿವಾರ 25 ಲಕ್ಷ ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಮಂಗಳಾ ಕ್ರೀಡಾಂಗಣದ ಬಳಿ ಟಿಡಿಆರ್ ಕ್ಲಿಯರೆನ್ಸ್ ಮಾಡಲು ಉದ್ಯಮಿ ಗಿರಿಧರ್ ಶೆಟ್ಟಿ ಅವರಿಂದ 25 ಲಕ್ಷ ರೂ. ಲಂಚ ಪಡೆಯುತ್ತಿದ್ದರು. ಈ ವೇಳೆ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು, ಮನ್ಸೂರ್ ಅಲಿ ಮತ್ತು ದಲ್ಲಾಳಿ ಸಲೀಂ ಎಂಬಾತನನ್ನು ವಶಕ್ಕೆ ಪಡೆದಿದ್ದಾರೆ.

ಲೋಕಾಯುಕ್ತ ಡಿವೈಎಸ್ಪಿ ಚೆಲುವರಾಜ್, ಇನ್ಸ್ಪೆಕ್ಟರ್ಗಳಾದ ಅಮಾನುಲ್ಲಾ, ಸುರೇಶ್ ಕುಮಾರ್ ನೇತೃತ್ವದ ಅಧಿಕಾರಿಗಳು ದಿಢೀರ್ ದಾಳಿ ಮಾಡಿ, ಮುಡಾ ಆಯುಕ್ತ ಮನ್ಸೂರ್ ಅಲಿಯನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಆಯುಕ್ತ ಮನ್ಸೂರ್ ಅಲಿ ಜೊತೆಗೆ ಬ್ರೋಕರ್ ಸಲೀಂ ಎಂಬುವವರನ್ನು ಕೂಡ ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ನಲ್ಲಿ ನೀರಿಗೆ ಕೊಳಚೆ ನೀರು ಸೇರ್ಪಡೆ: ನಿವಾಸಿಗಳ ಆಕ್ರೋಶ

ಬೆಂಗಳೂರು: ಚಾಮರಾಜಪೇಟೆಯ ಭಲವಾದಿ ಪಾಳ್ಯದ ನಿವಾಸಿಗಳು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ **(BWSSB)** ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ತಮ್ಮ ಸಮಸ್ಯೆ ಬಗೆಹರಿಸುವಂತೆ ಮತ್ತು ಕುಡಿಯುವ ನೀರಿನ ನಲ್ಲಿಗೆ ಚರಂಡಿ ನೀರು ಸೇರ್ಪಡೆಯಾಗುವುದನ್ನು ತಡೆಯಬೇಕೆಂದು ಒತ್ತಾಯಿಸಿದ್ದಾರೆ. ಆದರೆ ಹಳೆ ಮನೆಗಳ ಪೈಪ್‌ಲೈನ್ ಸಂಪರ್ಕ ಕಳಪೆ ಮಟ್ಟದಲ್ಲಿದೆ ಎಂಬುದು ಮಂಡಳಿ ಸಮಜಾಯಿಷಿಯಾಗಿದೆ.

ಭಲವಾದಿ ಪಾಳ್ಯ ವಾರ್ಡ್‌ನ ಜೈ ಭೀಮ್ ನಗರದ ನಿವಾಸಿ ವಸಂತಕುಮಾರ್, ಕಳೆದ ಒಂದೂವರೆ ವರ್ಷಗಳಿಂದ ನೀರಿನ ನಲ್ಲಿಗಳಿಗೆ ಚರಂಡಿ ನೀರು ಹರಿದು ಬರುತ್ತಿರುವ ಸಮಸ್ಯೆಯನ್ನು ಸರಿಪಡಿಸಿಲ್ಲ. ಈಗ ಮಾಧ್ಯಮಗಳಲ್ಲಿ ಸುದ್ದಿ ಬಂದ ಮೇಲೆ ಅಧಿಕಾರಿಗಳು ಇದೀಗ ಕ್ರಮಕ್ಕೆ ಮುಂದಾಗಿದ್ದಾರೆ ಎನ್ನುತ್ತಾರೆ.

ಕೊಳಕು, ಬಣ್ಣಬಣ್ಣದ ನೀರು ನಲ್ಲಿಗಳಲ್ಲಿ ಹರಿಯುತ್ತದೆ, ನಿವಾಸಿಗಳು ಟ್ಯಾಂಕ್‌ಗಳಿಂದ ನೀರನ್ನು ಸಂಗ್ರಹಿಸುವಂತೆ ಒತ್ತಾಯಿಸುತ್ತಾರೆ.

ಅಧಿಕಾರಿಗಳು ಸಮಸ್ಯೆ ನಿವಾರಣೆ ಹೆಸರಿನಲ್ಲಿ ಒಮ್ಮೊಮ್ಮೆ ಬಂದರೂ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಿ, ವಾಲ್ವ್‌ಗಳನ್ನು ಪರಿಶೀಲಿಸುತ್ತಿದ್ದಾರೆ. ಹೊಸ ಅಧ್ಯಕ್ಷರು ಬಂದ ಮೇಲೆ ಸಮಸ್ಯೆ ಬಗೆಹರಿಸಿದ್ದಾರೆ. ಅವರು ಇನ್ನು ಮುಂದೆ ಶುದ್ಧ ನೀರನ್ನು ಪೂರೈಸುತ್ತಾರೆ ಎಂದು ನಾವು ಭಾವಿಸುತ್ತೇವೆ ಎಂದರು.

ಈ ಬೆಳವಣಿಗೆಯ ಬಗ್ಗೆ ಪ್ರತಿಕ್ರಿಯಿಸಿದ ಭಲವಾದಿ ಪಾಳ್ಯ ವಾರ್ಡ್‌ನ ಬಿಡಬ್ಲ್ಯುಎಸ್‌ಎಸ್‌ಬಿ ವಾಟರ್ ಇನ್ಸ್‌ಪೆಕ್ಟರ್ ಮಂಜುನಾಥ್, ಕುಡಿಯುವ ನೀರಿನ ನಲ್ಲಿಗಳಿಗೆ ಕೊಳಚೆ ನೀರು ಹರಿಯುತ್ತಿರುವುದಕ್ಕೆ ಹಳೆಯ ಸಂಪರ್ಕದ ಪೈಪ್‌ಗಳು ಹಾನಿಯಾಗಿರುವುದರಿಂದ ಆಗಿದ್ದು ಇದಕ್ಕೂ ಬಿಡಬ್ಲ್ಯುಎಸ್‌ಎಸ್‌ಬಿಗೆ ಯಾವುದೇ ಸಂಬಂಧವಿಲ್ಲ ಎಂದು ಹೇಳಿದರು. ಪೈಪ್‌ಗಳನ್ನು ಸರಿಪಡಿಸಲಾಗಿದ್ದು, ಶೀಘ್ರದಲ್ಲೇ ಸಾಮಾನ್ಯ ನೀರು ಸರಬರಾಜು ಪುನರಾರಂಭವಾಗಲಿದೆ ಎಂದು ಮಂಜುನಾಥ್ ಹೇಳಿದರು.

ಕುಡಿಯುವ ನೀರಿನ ಪೈಪ್‌ಲೈನ್‌ಗಳಿಗೆ ಕೊಳಚೆ ನೀರು ಸೇರ್ಪಡೆಯಾಗುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆ ಎಚ್‌ಎಎಲ್ ವಾರ್ಡ್‌ನ ಅನ್ನಸಂದ್ರ ಪಾಳ್ಯದಲ್ಲಿ ನೂರಾರು ಮನೆಗಳ ನಲ್ಲಿಗಳಲ್ಲಿ ದುರ್ವಾಸನೆ ನೀರು ಬರುತ್ತಿತ್ತು. ಸಮಸ್ಯೆಯನ್ನು ಗುರುತಿಸಿ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ಬಿಡಬ್ಲ್ಯುಎಸ್‌ಎಸ್‌ಬಿ ಎಂಜಿನಿಯರ್ ಭರವಸೆ ನೀಡಿದ್ದಾರೆ.

ಬಾಲ್ಯದ ನೆನಪು ಬರೆಯೋದು ಕಷ್ಟ: ಐ.ಎಂ. ವಿಠಲಮೂರ್ತಿ

ಬೆಂಗಳೂರು: 'ಬಾಲ್ಯದ ನೆನಪುಗಳು, ಅನುಭವಗಳನ್ನು ವಯಸ್ಸಾದ ಮೇಲೆ ಬರೆಯುವುದು ಕಷ್ಟ' ಎಂದು ರಾಜ್ಯ ಸರ್ಕಾರದ ನಿವೃತ್ತ ಪ್ರಧಾನ ಕಾರ್ಯದರ್ಶಿ ಐ.ಎಂ.ವಿಠ್ಠಲಮೂರ್ತಿ ಹೇಳಿದರು.

ಅಬ್ಬೂರು ಪ್ರಕಾಶ್ ಅವರ 'ಕಣ್ಣ ಕನ್ನಡಿಯಲ್ಲಿ..' ಮತ್ತು ರೇಖಾ ಹೆಗಡೆ ಬಾಳೇಸರ ಅವರ 'ಕಾಡು ಕಾಡ್ತು' ಕೃತಿಗಳನ್ನು ನಗರದಲ್ಲಿ ಶನಿವಾರ ಬಿಡುಗಡೆ ಮಾಡಿ ಅವರು ಮಾತನಾಡಿದರು.

'ಸರ್ಕಾರಿ ಅಧಿಕಾರಿಗಳಿಗೆ ಆಡಳಿತದ ಅನುಭವವನ್ನು ಬರೆಯುವಂಥದ್ದು ಇರುವುದಿಲ್ಲ. ತೀರಾ ವೈಯಕ್ತಿಕವಾದುದನ್ನು ಬಿಟ್ಟರೆ ಎಲ್ಲ ಅಧಿಕಾರಿಗಳ ಅನುಭವ ಒಂದೇ ರೀತಿಯಾಗಿರುತ್ತದೆ. ಅರ್ಧ ಸತ್ಯ, ಇನ್ನರ್ಧ ನಟನೆಯಲ್ಲೇ ಕಾಲ ಕಳೆದು ಹೋಗಿರುತ್ತದೆ' ಎಂದು ವಿಶ್ಲೇಷಿಸಿದರು.

'ನಾನು ನಿವೃತ್ತನಾಗಿ 13 ವರ್ಷಗಳು ಕಳೆದವು. ವಿಧಾನಸೌಧದತ್ತ ತಲೆ ಹಾಕಿಲ್ಲ. ಯಾಕೆಂದರೆ ಹಿಂದೆ ಅದ್ಭುತವಾಗಿ ಕೆಲಸ ಮಾಡಿದ ಅಧಿಕಾರಿಗಳು ನಿವೃತ್ತರಾದ ಮೇಲೆ ವಿಧಾನಸೌಧಕ್ಕೆ ಬಂದು ಅನುಭವಿಸಿದ ಅವಮಾನಗಳನ್ನು ನೋಡಿದ ಮೇಲೆ ನನಗೂ ಅತ್ತ ಹೋಗಬೇಕು ಎಂದೆನ್ನಿಸಿಲ್ಲ' ಎಂದು ತಿಳಿಸಿದರು.

ಪ್ರಕಾಶ್ ಅವರ ಬರವಣಿಗೆ ಸುಲಲಿತವಾಗಿ ಓದಿಸಿಕೊಂಡು ಹೋಗುತ್ತದೆ. ತೇಜಸ್ವಿಯವರು ಮಲೆನಾಡಿನ ಅನುಭವವನ್ನು ಕಟ್ಟಿಕೊಟ್ಟಂತೆ, ಪ್ರಕಾಶ್ ಬಯಲುಸೀಮೆಯ ಅನುಭವ ಕಟ್ಟಿಕೊಟ್ಟಿದ್ದಾರೆ. ರೇಖಾ ಹೆಗಡೆ ಬಾಳೇಸರ ಅವರ ಕೃತಿಯೂ ಚೆನ್ನಾಗಿದೆ ಎಂದು ಶ್ಲಾಘಿಸಿದರು.

ನೇಣುಗಂಬಕ್ಕೆ ಕೊರಳೊಡ್ಡಿದಾಗ 23 ವರ್ಷ, ಇದು ಸಾಯುವ ವಯಸ್ಸಾ...?

ಸ್ವಾತಂತ್ರ್ಯ ಸಂಗ್ರಾಮ ಎಂಬ ಯಜ್ಞದಲ್ಲಿ ತಮ್ಮನ್ನು ಅರ್ಪಿಸಿಕೊಂಡು ದೇಶಕ್ಕಾಗಿ ಬಲಿದಾನಿಗಳಾದ ಮೂವರು ಕ್ರಾಂತಿಕಾರಿಗಳ ಮರೆಯಲಾಗದ ದಿನ. ಬ್ರಿಟಿಷರ ವಿರುದ್ಧ ಭಾರತದಲ್ಲಿ ನಡೆದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ತಮ್ಮ ಪ್ರಾಣವನ್ನೇ ಒತ್ತೆಯಿಟ್ಟ ಮೂವರು ಕ್ರಾಂತಿಕಾರಿಗಳ ತ್ಯಾಗ ಮತ್ತು ಬಲಿದಾನಗಳ ಮರೆಯಲಾಗದ ದಿನವೇ 23 ಮಾರ್ಚ 1931. ಕ್ರಾಂತಿಕಾರಿ ಹೋರಾಟಕ್ಕೆ ಹೊಸ ಭಾಷ್ಯ ಬರೆದ ಭಗತ್ ಸಿಂಗ್, ಸುಖದೇವ್ ಮತ್ತು ರಾಜಗುರು ಅಂದು ಪ್ರಾಣತ್ಯಾಗ ಮಾಡಿದ ಬಲಿದಾನಿಗಳು. ಈ ಮೂರು ಜನ ದೇಶಪ್ರೇಮಿಗಳು ದೇಶಕ್ಕಾಗಿ ನಗುನಗುತ್ತಾ ತಮ್ಮ ಕೊರಳೊಡ್ಡಿ ನೇಣುಗಂಬಕ್ಕೆ ಏರಿದರು ಎಂಬ ಘಟನೆ ನೆನೆದಾಗಲೆಲ್ಲಾ ಹೃದಯ ತುಂಬಿ ಬರುತ್ತದೆ. ಆಗ ಭಗತ್ ಸಿಂಗರಿಗೆ ಕೇವಲ 23 ವರ್ಷ ಎಂಬುದು ಅಚ್ಚರಿ ಮೂಡಿಸುತ್ತದೆ. ಇದು ಸಾಯುವ ವಯಸ್ಸಾ, ನೀವೆ ಹೇಳಿ? ಆ ವಯಸ್ಸಿನಲ್ಲಿ ಅವರಿಗಿದ್ದ ಅಪಾರ ಹುಮ್ಮಸ್ಸು ವಿಶ್ವದ ಬಗೆಗಿನ ಜ್ಞಾನ, ಓದುವ ಆಸಕ್ತಿ, ದೇಶಭಕ್ತಿ ಇದೆಲ್ಲಾ ನೆನೆದರೆ ಮನಸ್ಸು ಮೂಕವಾಗುತ್ತದೆ. ಕಾನೂನು ವ್ಯವಸ್ಥೆಗಳ ಮೂಲಕ ಸ್ವಾತಂತ್ರ್ಯ ಹೋರಾಟದಲ್ಲಿದ್ದ ಭಾರತೀಯರನ್ನು ಸದೆಬಡಿಯುತ್ತಿದ್ದ ಬ್ರಿಟಿಷರ ವಿರುದ್ಧ ಅವರದು ದಿಟ್ಟ ಹೋರಾಟ. ಹಿಂದೂಸ್ಥಾನ್ ಸೋಷಿಯಲಿಸ್ಟ್ ರಿಪಬ್ಲಿಕ್ ಆರ್ಮಿ ಎನ್ನುವ ಸಂಘಟನೆಯಲ್ಲಿ ಅವರೊಂದಿಗೆ ಚಂದ್ರಶೇಖರ್ ಆಜಾದ್ ಮುಂತಾದ ಅನೇಕ ಯುವಕರಿದ್ದರು.

ಭಗತ್ ಸಿಂಗ್ ತಮ್ಮಹದಿಮೂರನೆಯ ವಯಸ್ಸಿನಲ್ಲಿಯೇ ಗಾಂಧೀಜಿಯವರ ಅನುಯಾಯಿಯಾದರು. ಗಾಂಧೀಜಿಯವರ ಅಸಹಕಾರ ಚಳುವಳಿ ಈ ಯುವಕರಿಗೆ ಆಶಾದಾಯಕವಾಗಿ ಕಂಡಿತ್ತು. ಆದರೆ ಗಾಂಧೀಜಿಯವರು ಅಸಹಕಾರ ಚಳುವಳಿಯನ್ನು ಹಿಂತೆಗೆದುಕೊಂಡಾಗ ಈ ಯುವಕರಿಗೆ ಸ್ವಾತಂತ್ರ್ಯದ ಕನಸು ಭ್ರಮನಿರಸನ ಎಂಬ ಭಾವ ಮೂಡಿತು. ಜಲಿಯನ್ ವಾಲಾಬಾಗ್

ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆ ಜನರಿಗೆ ತಿಳಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಹೆಬ್ಬಾಳ ಗ್ರಾಮದಲ್ಲಿ ಆಯೋಜಿಸಲಾದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಬೂತ ಮಟ್ಟದ ಸಭೆ

ಯಮಕನಮರಡಿ: ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿ ಮಾಡುವ ಮೂಲಕ ನಾಡಿನ ಜನರ ಹಿತಕಾಯುವ ಕೆಲಸ ಮಾಡಿದೆ. ಪ್ರತಿಯೊಂದು ಮನೆಯಲ್ಲೂ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಯೋಜನೆಗಳ ಪಲಾನುಭವಿಗಳಿದ್ದು ಇವರೆಲ್ಲಾ ನಮ್ಮ ಪಕ್ಷಕ್ಕೆ ಆಶೀರ್ವಾದ ಮಾಡುತ್ತಾರೆಂಬ ಭರವಸೆ ಇದೆ ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಪ್ರಿಯಂಕಾ ಜಾರಕಿಹೊಳಿ ಹೇಳಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಹೆಬ್ಬಾಳ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಚುನಾವಣೆಯ ನಿಮಿತ್ತ ಆಯೋಜಿಸಲಾದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಬೂತ ಮಟ್ಟದ ಸಭೆಯಲ್ಲಿ ಅವರು ಮಾತನಾಡಿ, ಕಾಂಗ್ರೆಸ್ ಯೋಜನೆಗಳ ಫಲಾನುಭವಿಗಳಿಗೆ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳ ಅರಿವು ಮೂಡಿಸುವ ಮಹತ್ತರವಾದ ಜವಾಬ್ದಾರಿ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತೆಯರ ಮೇಲಿದೆ ಎಂದ ಅವರು, ದೇಶದ ಭದ್ರ ಬುನಾದಿಗೆ ಯುವಕರು ರಾಜ-ಕೀಯಕ್ಕೆ ಬರಬೇಕಾಗಿದೆ. ಹೀಗಾಗಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ಸಿಕ್ಕಿದೇ , ತಂದೆಯರಿಗೆ ತೋ-ರಿದ ಅಭಿಮಾನ- ಬೆಂಬಲ ನಿಮ್ಮ ಮನೆ ಮಗಳಾದ ನನಗೂ ನೀಡಿ, ಕ್ಷೇತ್ರದ ಜನರ ಸೇವೆ ಮಾಡಲು ಮತದಾರರು ಆಶೀರ್ವಾದ ಮಾಡಬೇಕು" ಎಂದರು.

ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ-ಸಹಕಾರ ಮಾಡಲಾಗಿದೆ. ನಿಮ್ಮ ಮನೆ ಮಗಳನ್ನು ಮತದಾರರು ಸಹಕ-ರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು ಎಂದು ಹೇಳಿದರು.

ಯುವ ನಾಯಕ ರಾಹುಲ್ ಜಾರಕಿಹೊಳಿ ಮಾತನಾಡಿ, ಬೇರುಮಟ್ಟದಿಂದ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಕಾರ್ಯಕರ್ತರು ಸಿದ್ದರಾಗಬೇಕು. ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಲು ಕಾರ್ಯಕರ್ತರು ಮುಂದಾಗಬೇಕು. ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದವರು ಕಾಂಗ್ರೆಸ್, ದೇಶಕ್ಕೆ ಸ್ವಾತಂತ್ರ್ಯ ಸಿಗಲು ಹೋರಾಟ ಮಾಡಿದವರು ಕಾಂಗ್ರೆಸ್ . ಹೀಗಾಗಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಟ್ಟು ಸಹೋದರಿ ಆಯ್ಕೆ ಮಾಡಿ ಲೋಕಸಭೆಗೆ ಕಳಿಸೋಣ ಎಂದರು.

'ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರ ಕೊಡುಗೆ ಅಪಾರ. ಸಾಮಾಜಿ-ಕ ನ್ಯಾಯ ಕೊಡುವಲ್ಲಿ ಕಾಂಗ್ರೆಸ್ ಪಕ್ಷ ದ ಪಾತ್ರ ಮುಖ್ಯ ಪಾತ್ರ ವಹಿಸಿದೆ. ಇಂದಿನ ನಿರುದ್ಯೊ?ಗ ಹೆಚ್ಚಳಕ್ಕೆ ಬಿಜೆಪಿಯೇ ಕಾರಣ. ಅಚ್ಛೆ ದಿನ್ ಬರುತ್ತವೆ ಎಂದು ಹೇಳಿರುವ ಬಿಜೆಪಿ, 9 ವರ್ಷ ಗತಿಸಿದರೂ ಯಾವುದೇ ಅಚ್ಛೆ ದ್ದಿನ್ ತರಲಿಲ್ಲ' ಎಂದ ಅವರು, ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಹಾಗೂ ಪಕ್ಷ ದ ತತ್ವ ಸಿದ್ಧಾಂತಗಳನ್ನು ಜನರಿಗೆ ಮುಟ್ಟಿಸುವ ಮೂಲಕ ಬೂತ ಮಟ್ಟದಿಂದ ಪಕ್ಷ ಸಂಗಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಇದೇ ವೇಳೆ ಹೆಬ್ಬಾಳ ಗ್ರಾಮದ ಮುಖಂಡರು ಯುವ ನಾಯಕ ರಾಹುಲ್ ಜಾರಕಿಹೊಳಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಪ್ರಿಯಂಕಾ ಜಾರಕಿಹೊಳಿ ಅವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಿಶಾಲ ಖೋತ, ಗುರು ಹಿರೇಮಠ, ಶಹನಾಜ್ ಬಡೆಕಾಯಿ, ಯಮಕನಮರಡಿ ಗ್ರಾಪಂ ಅಧ್ಯಕ್ಷರು ಆಸ್ಮ ಪನಿಬಂದ್, ಮಾಂತೇಶ್ ಮಗದುಮ್ಮ, ಉಪಾಧ್ಯಕ್ಷರು ರಾಜು ಕುದುರೆ , ಈರಣ್ಣ ಬಿಸಿರೊಟ್ಟಿ, ಕಿರಣ್ ರಜಪೂತ, ಹತ್ತರಿಗಿ ಗ್ರಾಪಂ ಅಧ್ಯಕ್ಷರು ಸಮೀರ್ ಬೇಪಾರಿ, ಮಾಜಿ ಗ್ರಾಮ ಪಂ ಅಧ್ಯಕ್ಷರು ಮಹದೇವ್ ಪಟ್ಟೋಳಿ, ಈರಣ್ಣ ಕುಡಚಿ, ಜೋಮಲಿಂಗ ಪಟೋಳಿ, ಶಂಕರ್ ಕುಡಚಿ, ಬಸು ಅತ್ತಿಮರದ, ರವಿ ಜಿಂಡ್ರಾಳಿ, ಹೆಬ್ಬಾಳ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ಇದ್ದರು.

ವಿದ್ಯುತ್ ಸ್ಪರ್ಶದಿಂದ ಕಾಡಾನೆ ಸಾವು

ಯಲ್ಲಾಪುರ: ವಿದ್ಯುತ್ ತಂತಿ ತಗುಲಿ ಕಾಡಾನೆಯೊಂದು ಮೃತಪಟ್ಟಿರುವ ಘಟನೆ ಅರಣ್ಯ ವಲಯದ ದೇಹಳ್ಳಿ ಶಾಖೆಯ ಕಟ್ಟಿಗೆ ಗ್ರಾಮದ, ಹಿಡ್ಕೆಮನೆ ತೋಟದಲ್ಲಿ ದಲ್ಲಿ ನಡೆದಿದೆ.

ಈ ಬಗ್ಗೆ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದು ತನಿಖೆ ಕೈಗೊಳ್ಳಲಾಗಿದೆ ಎಂದು ಯಲ್ಲಾಪುರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷ ಭಾನು ಮಾಹಿತಿ ನೀಡಿದ್ದಾರೆ.

ದಾಂಡೇಲಿಯ ಕಾಳಿ ವನ್ಯಜೀವಿ ವಿಭಾಗದ ವನ್ಯಜೀವಿ ವಿಧಿ ವಿಜ್ಞಾನ ಪರಿಣಿತರು ಆಗಮಿಸಿ ಸದರಿ ಪ್ರಕರಣದ ಸ್ಥಾನಿಕ ಪರಿಶೀಲನೆ ಮಾಡಿ ಸಾಕ್ಷಾಧಾರಗಳನ್ನು ಸಂಗ್ರಹಿಸಿದರು.

ಯಲ್ಲಾಪುರ ಹಾಗೂ ಶಿರಸಿಯಿಂದ ಆಗಮಿಸಿದ ಪಶು ವೈದ್ಯರ ತಂಡವು ಮೃತ ಆನೆಯ ಮರಣೋತ್ತರ ಪರೀಕ್ಷೆಯನ್ನು ನಡೆಸಿ ಹೆಚ್ಚಿನ ತನಿಖೆಗಾಗಿ ಅಂಗಾಂಗಗಳ ಮಾದರಿಯನ್ನು ಸಂಗ್ರಹಿಸಿದರು.

ನಂತರ ವಿಧಿ ವಿಧಾನ ಅನುಸರಸಿ ಮೃತ ಕಾಡಾನೆಯನ್ನು ಮಣ್ಣಲ್ಲಿ ಹೂಳುವ ಮೂಲಕ ಅಂತ್ಯಕ್ರಿಯೆ ನೇರವೇರಿಸಲಾಯಿತು.

ಸ್ಥಳದಲ್ಲಿ ಯಲ್ಲಾಪುರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷ ಭಾನು ಜಿ.ಪಿ,ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಆನಂದ್ ಎಚ್.ಎ ,ವಲಯ ಅರಣ್ಯಾಧಿಕಾರಿ ಎಲ್ ಎ ಮಠ ಹಾಗೂ ಅರಣ್ಯ, ಕೆ ಇ ಬಿ, ಇಲಾಖೆ ಯ ಅಧಿಕಾರ ಗಳು ಸಿಬ್ಬಂದಿಗಳು, ಗ್ರಾಮಸ್ಥರು ಸ್ಥಳದಲ್ಲಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಬೆಂಬಲಿಸಲು ಸಚಿವ ಸತೀಶ್ ಜಾರಕಿಹೊಳಿ ಕರೆ

ಚನ್ನಮ್ಮನ ಕಿತ್ತೂರು ಪಟ್ಟಣದಲ್ಲಿ ಆಯೋಜಿಸಿದ್ದ ಉತ್ತರ ಕನ್ನಡ ಲೋಕಸಭೆ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಬೆಳಗಾವಿ: ಮತದಾರರು ಈ ಭಾರಿ ಅಭಿವೃದ್ಧಿ ಪರ ಮತ ಚಲಾಯಿಸಲು ಕಾಂಗ್ರೆಸ್ ಅಭ್ಯರ್ಥಿ ಡಾ. ಅಂಜಲಿ ನಿಂಬಾಳಕರ ಅವರಿಗೆ ಮತ ನೀಡಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಕರೆ ನೀಡಿದರು.

ಚನ್ನಮ್ಮನ ಕಿತ್ತೂರು ಪಟ್ಟಣದಲ್ಲಿ ಆಯೋಜಿಸಿದ್ದ ಉತ್ತರ ಕನ್ನಡ ಲೋಕಸಭೆ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ಬಿಜೆಪಿ ಕೇಂದ್ರ ಸರ್ಕಾರ ನಿರುಪಯುಕ್ತ ಯೋಜನೆಗಳನ್ನು ಜಾರಿ ಮಾಡಿದ್ದು, ಕಳೆದು 10 ವರ್ಷಗಳಲ್ಲಿ ನೀರಾವರಿ ಸೇರಿದಂತೆ ಯಾವುದೇ ಎಲ್ಲ ರಂಗಗಳಿಗೂ ಬಿಜೆಪಿಯ ಕೊಡುಗೆ ಶೂನ್ಯವಾಗಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ಸರ್ಕಾರ ಸಾಮಾಜಿ-ಕ ನ್ಯಾಯದ ತಳಹದಿಯ ಮೇಲೆ ಎಲ್ಲ ಜಾತಿಯವರಿಗೂ ಟಿಕೆಟ್ ನೀಡಿ ಅವಕಾಶ ಕಲ್ಪಿಸಿದೆ. ವಿಧಾನಸಭೆಯ



ಚುನಾವಣೆಯಂತೆ ಈ ಲೋಕಾಸಭಾ ಚುನಾವಣೆ ಎದುರಿಸಲು ಸಿದ್ದ-ರಿದ್ದು ಮತದಾರರು ಕಾಂಗ್ರೆಸ್ ಪರ ಅಭ್ಯರ್ಥಿಯನ್ನು ಬೆಂಬಲಿಸಬೇಕೆಂದು ಹೇಳಿದರು.

ಚುನಾವಣೆ ಸಂದರ್ಭದಲ್ಲಿ ಮಾತ್ರ ಪ್ರತ್ಯಕ್ಷವಾಗಿ ಇಲ್ಲ ಸಲ್ಲದ ಆರೋಪಗಳ ಮೂಲಕ ಜನರ ದಾರಿ ತಪ್ಪಿಸುವ ವ್ಯಕ್ತಿ 6 ಭಾರಿ ಸಂಸದರಾದರೂ ಖಾನಾಪುರ ಹಾಗೂ ಕಿತ್ತೂರು ಕ್ಷೇತ್ರದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಚುನಾವಣೆಯ ಸಂದರ್ಭದಲ್ಲಿ ಧರ್ಮ ಆಧಾರಿತ ಹಾಗೂ ಭಾವನಾತ್ಮಕವಾಗಿ ಮಾತನಾಡುವವ-ರಿಗೆ ಮತ ಹಾಕಲು ಅಸಾಧ್ಯ, ಮತದಾರರು ಈ ಭಾರಿ ಅಭಿವೃದ್ಧಿ ಪರ ಮತ ಚಲಾಯಿಸಬೇಕೆಂದು ಮನವಿ ಮಾಡಿದರು.

ಉತ್ತರಕನ್ನಡ ಕಾಂಗ್ರೆಸ್ ಅಭ್ಯರ್ಥಿ ಡಾ. ಅಂಜಲಿ ನಿಂಬಾಳ್ಕರ ಮಾತನಾಡಿ, ದೇಶ ಮುನ್ನಡೆಯಬೇಕಾದರೆ ಸಂವಿಧಾನ ಅವಶ್ಯ, ಸಂವಿಧಾನ ರಕ್ಷಣೆ ಮಾಡುವ ವ್ಯಕ್ತಿಗಳು ದೇಶಕ್ಕೆ ಬೇಕು, ಆದ-ರೇ ಸಂವಿಧಾನ ಬದಲಾಯಿಸುವ ಜನರ ಅವಶ್ಯಕತೆ ನಮಗಿಲ್ಲ. ಇದು ಕೇವಲ ಲೋಕಸಭಾ ಚುನಾವಣೆಯಲ್ಲ, ಕೇವಲ ಬಿಜೆಪಿ ಹಾಗೂ ಕಾಂಗ್ರೆಸ್ ಚುನಾವಣೆಯಲ್ಲ, ಇದು ಬಡವರ ಹಾಗೂ ಶ್ರೀಮಂತರ ನಡುವಿನ ಚುನಾವಣೆ, ನ್ಯಾಯ ಅನ್ಯಾಯದ ನಡುವಿನ ಚುನಾವಣೆಯಾಗಿದೆ. ಹೇಳಿದಂತೆ ನಡೆಯುವ ಸರ್ಕಾರ ನಮ್ಮದು, ರಾಜ್ಯದಲ್ಲಿ ನೀಡಿದ ಎಲ್ಲ ಗ್ಯಾರೆಂಟಿಗಳನ್ನು ಜಾ-ರಿಗೊಳಿಸಲಾಗಿದೆ ಅದರಂತೆಯೇ ಲೋಕಸಭೆ ಚುನಾವಣೆಯಲ್ಲಿಯೂ ಕಾಂಗ್ರೆಸ್ ಹಲವು ಗ್ಯಾರೆಂಟಿ ಘೋಷಣೆ ಮಾಡಿದ್ದು ಅಧಿಕಾರಕ್ಕೆ ಬಂದರೆ ಕೇವಲ ತಿಂಗಳೋಳಗೆ ಅವುಗಳನ್ನು ಅನುಷ್ಠಾನಗೊಳಿಸುತ್ತೇವೆ ಎಂದು ಭರವಸೆ ನೀಡಿದರು.

ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ, ಉತ್ತರ ಕನ್ನಡ ಲೋಕಸಭೆಯ ಚುನಾವಣೆಯಲ್ಲಿ ಖಾನಾಪುರ ಕ್ಷೇತ್ರದ ಡಾ. ಅಂಜಲಿ ನಿಂಬಾಳ್ಕರ ಅವರಿಗೆ ಕಾಂಗ್ರೆಸ್ ಪಕ್ಷ ಅಭ್ಯರ್ಥಿಯಂದು ಘೋಷಣೆ ಮಾಡಿದ್ದು ನಮ್ಮೆಲ್ಲರಿಗೂ ಸಂತಸ ತಂದಿದೆ. ಇದನ್ನು ಮತದಾರರು ಮತ ನೀಡುವ ಮೂಲಕ ಸದುಪಯೋಗ ಪಡಿಸಿಕೊಳ್ಳಬೇಕು. ಒಳ್ಳೆಯ ನಾಯಕರ ಬೆಂಬಲ ನಮ್ಮೆಲ್ಲರಿಗಿದ್ದು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಗೆಲವು ಸಾಧಿಸುವ ಪಣವನ್ನು ಕಾರ್ಯಕರ್ತರು ತೊಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಚಾರ ಸಮಿತಿ ಅಧ್ಯಕ್ಷ ರಾಜಾಸಲೀಂ ಕಾಶೀಂನವರ, ಶಂಕರ ಹೊಳಿ, ಬ್ಲಾಕ ಅಧ್ಯಕ್ಷರಾದ ಸಂಗನಗೌಡ ಪಾಟೀಲ, ನಿಂಗಪ್ಪ ಅರಕೇರಿ, ಕಿತ್ತೂರು ಹಾಗೂ ಎಂ.ಕೆ. ಹುಬ್ಬಳ್ಳಿಯ ಪಟ್ಟಣ ಪಂಚಾಯಿತಿಯ ಸದಸ್ಯರು ಹಾಜರಿದ್ದರು.

ಬೆಳಗಾವಿಯಲ್ಲಿ ಹಲಗಾ-ಮಚ್ಛೆ ಬೈಪಾಸ್ ರಸ್ತೆ ಕಾಮಗಾರಿ ವಿರೋಧಿಸಿ ರೈತರ ಪ್ರತಿಭಟನೆ

ಬೆಳಗಾವಿ: ಹಲಗಾ-ಮಚ್ಛೆ ಬೈಪಾಸ್ ರಸ್ತೆ ಕಾಮಗಾರಿ ನಡೆಸುತ್ತಿರುವುದನ್ನು ವಿರೋಧಿಸಿ ರೈತರು ಬೆಳಗಾವಿ ಚನ್ನಮ್ಮನ ವೃತ್ತ ಬಳಿ ರೈತ ಮಹಿಳೆಯರು ಉರುಳು ಸೇವೆ ಮಾಡಿ ತೀವ್ರ ಪ್ರತಿಭಟನೆ ನಡೆಸಿ ನಂತರ ಜಿಲ್ಲಾಧಿಕಾರಿ ನಿತೇಶ ಪಾಟೀಲ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಇದಕ್ಕೂ ಮೊದಲು ಚೆನ್ನಮ್ಮ ವೃತ್ತದಿಂದ ಡಿಸಿ ಕಚೇರಿವರೆಗೆ ಮೆರವಣಿಗೆ ನಡೆಸಿದ ರೈತರು ಸರ್ಕಾರ ಮತ್ತು ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ರೈತರ ಪ್ರತಿಭಟನೆಗೆ ಎಂ ಇ ಎಸ್ ಮುಖಂಡ ರಮಾಕಾಂತ್ ಕೊಂಡುಸ್ಕರ್

ರದ್ದು ಮಾಡಿ ರದ್ದು ಮಾಡಿ ಹಾಲಗಾ-ಮಚ್ಛೆ ಬೈಪಾಸ್ ರದ್ದು ಮಾಡಿ

ಲೋಕಸಭಾ ಚುನಾವಣೆ: ದೂರು ನಿರ್ವಹಣೆ, ಎಂಸಿಸಿ, ಸಿವಿಜಿಲ್ ಕೇಂದ್ರಗಳ ಸ್ಥಾಪನೆ

ಬೆಳಗಾವಿ: ಭಾರತ ಚುನಾವಣಾ ಆಯೋಗದಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ದಿನಾಂಕ ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಚುನಾವಣೆಯ ಮಾದರಿ ನೀತಿ ಸಂಹಿತೆಯು ಮಾರ್ಚ್ 16, 2024 ರಿಂದ ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ದೂರು ನಿರ್ವಹಣಾ ಕೇಂದ್ರ, ಮಾದರಿ ನೀತಿ ಸಂಹಿತೆ ನಿಯಂತ್ರಣ ಕೊಠಡಿ ಹಾಗೂ ಅ-ಗುರುಟ ಕೊಠಡಿಯನ್ನು ಸ್ಥಾಪಿಸಲಾಗಿತ್ತು. ಪ್ರಸ್ತುತ ಸದರಿ ನಿಯಂತ್ರಣ ಕೊಠಡಿಗಳನ್ನು ಬೆಳಗಾವಿ ವಿಶ್ವೇಶ್ವರಯ್ಯಾ ನಗರದ ಸ್ಮಾರ್ಟಸಿಟಿ ಕಮಾಂಡ್ ಆ್ಯಂಡ್ ಕಂಟ್ರೋಲ್ ಸೆಂಟರ್ ಸಭಾಂಗಣಕ್ಕೆ ಸ್ಥಳಾಂತರಿಸಲಾಗಿದೆ.

ದೂರು ನಿರ್ವಹಣಾ ಕೇಂದ್ರ ದೂರವಾಣಿ ಸಂಖ್ಯೆ 0831-2007015, ಮಾದರಿ ನೀತಿ ಸಂಹಿತೆ ಕೊಠಡಿ ಸಂಖ್ಯೆ 0831-2007018, ಸಿವಿಜಿಲ್(ಅ-ಗುರುಟ) ದೂರವಾಣಿ ಸಂಖ್ಯೆ 0831-2007017 ಗೆ ಸಾರ್ವಜನಿಕರು ಕರೆ ಮಾಡಬಹುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಧಿಕಾರಕ್ಕೆ ಬಂದಾಗಲೆಲ್ಲ ಕಾಂಗ್ರೆಸ್ ಸಾಮಾಜಿಕ ಬದ್ಧತೆಯಿಂದ ಕೆಲಸ ಮಾಡಿದೆ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಖಾನಾಪುರ: ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲಾ ರೈತರ ಪರವಾಗಿ, ಯುವಕರ ಪರವಾಗಿ, ಸಾಮಾಜಿಕ ಬದ್ಧತೆಯನ್ನು ಉಳಿಸಿಕೊಂಡು ಬಂದಿದೆ. ಎಲ್ಲರಿಗೂ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಖಾನಾಪುರದ ಶನಾಯಾ ಹಾಲ್ ನಲ್ಲಿ ಶನಿವಾರ ನಡೆದ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಎಂದೂ ಜನ-ರಿಗೆ ಮೋಸ ಮಾಡಿಲ್ಲ. ಭಾವನೆಗಳನ್ನು ಕೆರಳಿಸಿ ಆಟವಾಡಿಲ್ಲ. ಈ ಬಾರಿಯೂ ಎಲ್ಲ ಪಂಚ ಗ್ಯಾರಂಟಿಗಳನ್ನೂ ಜಾ-ರಿಗೊಳಿಸುವ ಮೂಲಕ ಜನರಿಗೆ ನೆಮ್ಮದಿಯ ಬದುಕು ಕಟ್ಟಿಕೊಡಲು ಪ್ರಯತ್ನಿಸಿದೆ ಎಂದು ಹೇಳಿದರು.

ಉತ್ತರ ಕನ್ನಡ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ದಕ್ಷ ಆಡಳಿತಕ್ಕೆ ಹೆಸರಾಗಿರುವ ನಾಯಕಿ ಅಂಜಲಿ ನಿಂಬಾಳ್ಕರ್ ಅವರನ್ನು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬೆಂಬಲಿಸಿ ಎಂದು ಹೆಬ್ಬಾಳ್ಕರ್ ಮನವಿ ಮಾಡಿದರು.

ಡಾ.ಅಂಜಲಿ ನಿಂಬಾಳ್ಕರ್ ಅವರು ಕಳೆದ ಅವಧಿಯಲ್ಲಿ ಖಾನಾಪುರದ ಶಾಸಕರಾಗಿದ್ದ ವೇಳೆ ಸ್ಥಳೀಯ ಸಮಸ್ಯೆಗಳ ಬಗ್ಗೆ ವಿಧಾನಸಭೆಯ ಅಧಿವೇಶನದಲ್ಲಿ ಪ್ರಸ್ತಾಪಿಸುತ್ತಿದ್ದರು. ಇದೇ ಧ್ವನಿ ದೆಹಲಿಯಲ್ಲೂ ಕೇಳಬೇಕು ಎಂದರೆ ಅಂಜಲಿ ನಿಂಬಾಳ್ಕರ್ ಅವರನ್ನು ಬೆಂಬಲಿಸಬೇಕು ಎಂದು ಹೇಳಿದರು.

ನಮ್ಮ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸುವ ನಾಯಕಿಯನ್ನು ನಾವು ಆರಿಸಬೇಕಿದೆ. ಕಳೆದ ವಿಧಾನಸಭೆಯಲ್ಲಿ ಖಾನಾಪುರದ ಜನ ಅಂಜಲಿ ಅವರನ್ನು ಸೋಲಿಸಿದ್ದೆ ಒಂದು ಆಶ್ಚರ್ಯ. ಹಿಂದಿನ ಅವಧಿಯಲ್ಲಿ ನಾಲ್ಕು ವರ್ಷಗಳ ಕಾಲ ವಿರೋಧ ಪಕ್ಷದಲ್ಲಿ ಇದ್ದರೂ ಖಾನಾಪುರ ಕ್ಷೇತ್ರದಲ್ಲಿ ಅಂಜಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದರು. ಒಬ್ಬ ಮಹಿಳೆಯಾಗಿ ರಾಜಕೀಯದಲ್ಲಿ ಹೋರಾಡುವುದು ಅಷ್ಟು ಸುಲಭವಲ್ಲ ಎಂದು ಹೇಳಿದರು.

ಮನೆಯನ್ನು ನಿಭಾಯಿಸುವ ಮಹಿಳೆ ಇಡೀ ದೇಶವನ್ನು ನಿಭಾಯಿಸಲು ಸಾಮರ್ಥ್ಯ ಹೊಂದಿರುತ್ತಾಳೆ.

ಹೀಗಾಗಿ ನಮ್ಮ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಉತ್ತರ ಕನ್ನಡ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಅಂಜಲಿ ನಿಂಬಾಳ್ಕರ್ ಅವರನ್ನು ಕಣಕ್ಕಿಳಿಸಿದ್ದಾರೆ ಎಂದು ಸಚಿವೆ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮುಖಂಡತ್ವದಲ್ಲಿ ಈ ಮೂರು (ಬೆಳಗಾವಿ, ಚಿಕ್ಕೋಡಿ, ಉತ್ತರ ಕನ್ನಡ) ಕ್ಷೇತ್ರಗಳ ಚುನಾವಣೆ ನಡೆಯಲಿದೆ ಎಂದರು. ನಾನು 1999 ರಲ್ಲಿ ಖಾನಾಪುರದಲ್ಲಿ ಸಾಮಾನ್ಯ ಕಾರ್ಯಕರ್ತೆಯಾಗಿ ರಾಜ-ಕೀಯ ಜೀವನ ಆರಂಭಿಸಿದೆ.

ನನ್ನ ರಾಜಕೀಯದ ಜನ್ಮ ಸ್ಥಳವೇ ಖಾನಾಪುರ ಎಂದು ಹೇಳಿದರು.

ಸಭೆಯಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಖಾನಾಪುರ ವಿಧಾನ ಸಭಾ ಕ್ಷೇತ್ರದ ಮಾಜಿ ಶಾಸಕಿ, ಕೆನರಾ ಕ್ಷೇತ್ರದ ಅಭ್ಯರ್ಥಿ ಅಂಜಲಿ ನಿಂಬಾಳ್ಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಶಾಸಕ ಆಸೀಫ್ ಸೇಠ್, ಡಾ.ಜವಳಿ, ಗೌಸಲಾಲ್ ಪಟೇಲ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹದೇವ್ ಕೋಳಿ, ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಧು ಕವಳೇಕರ್, ಬ್ಲಾಕ್ ಕಾಂಗ್ರೆಸ್ ನ ಮಹಿಳಾ ಅಧ್ಯಕ್ಷೆ ಗೀತಾ ಅಂಬಡಗಟ್ಟಿ, ರಿಯಾಜ್ ಪಾಟೀಲ, ಅನಿತಾ ದಂಡಗಲ್ಕರ್, ಚಂಬಣ್ಣ ಹೊಸಮನಿ, ಶಂಕರಗೌಡ ಪಾಟೀಲ, ಪಕ್ಷದ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

ಶ್ರೀ ಸಿದ್ಧಾಂತ ಶಿಖಾಮಣಿ ಎಲ್ಲರಿಗೂ ಮಾರ್ಗದರ್ಶಿ: ಕಾರಂಜಿಮಠದ ಶ್ರೀ ಗುರುಸಿದ್ಧ ಸ್ವಾಮೀಜಿ



ಬೆಳಗಾವಿ: ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಮಾನ್ಯರು ಇವರು ನೀಡಿದ ಶ್ರೀ ಸಿದ್ಧಾಂತ ಶಿಖಾಮಣಿ ಎಲ್ಲರಿಗೂ ಮಾರ್ಗದರ್ಶಿಯಾಗಿದೆ ಎಂದು ಕಾರಂಜಿಮಠದ ಶ್ರೀ ಗುರುಸಿದ್ಧ ಸ್ವಾಮೀಜಿ ಹೇಳಿದರು.

ಶನಿವಾರ ಸಂಜೆ ಲಕ್ಷ್ಮೀ ಟೆಕಡಿಯಲ್ಲಿರುವ ಹುಕ್ಕೇರಿ ಹಿರೇಮಠದ ಶಾಖೆಯಲ್ಲಿ ನಡೆದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದ ಸಾನಿಧ್ಯ ವಹಿಸಿ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯರು ನೀಡಿದ ಸಿದ್ಧಾಂತ ಶಿಖಾಮಣಿ 19 ಭಾಷೆಯಲ್ಲಿ ಲಭ್ಯವಿರುವುದು ಸಂತಸ ತಂದಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರು ಕೇವಲ ಒಂದೇ ಜಾತಿಗೆ ಸೀಮಿತರಾದವರಲ್ಲ. ಎಲ್ಲಾ ಸಮುದಾಯವನ್ನು ಕೂಡ ತಮ್ಮ ಮಾರ್ಗದರ್ಶನದಲ್ಲಿ ಕರೆದುಕೊಂಡು ಹೋದ ದಿವ್ಯ ಮಹಾತ್ಮರು. ಇವರ ಜಯಂತಿಯನ್ನು ನಾವೆಲ್ಲರೂ ಆಚರಿಸುತ್ತ ಅವರ ತತ್ವಗಳನ್ನು ಅಳವಡಿಸಿಕೊಳ್ಳುತ್ತ ಬಂದರೆ ಬದುಕು ಬಂಗಾರವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಸುಮಂಗಲಾ ಶಿಂತ್ರೆ, ವಿಜಯ ಶಾಸ್ತ್ರೀಗಳು ಬೆಳಗಾವಿ, ಚಂದ್ರಶೇಖರಯ್ಯ ಸವಡಿ ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಕುರಿತು ಮಾತನಾಡಿದರು. ವೀರುಪಾಕ್ಷಯ್ಯ ನೀರಲಗಿಮಠ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ನಗರದ ವೀರಶೈವ ಲಿಂಗಾಯತ ಮುಖಂಡರು ಹಾಗೂ ರೋಟರಿ ಕ್ಲಬ್ ಆಫ್ ಬೆಳಗಾಮ್ ಸೆಂಟ್ರಲ್ ಸದಸ್ಯರು ಉಪಸ್ಥಿತರಿದ್ದರು.

ಚಿಕನ್ ಪ್ರಿಯರಿಗೆ ಶಾಕ್: ಏಕಾಏಕಿ ದರ ಏರಿಕೆ

ಬೆಂಗಳೂರು: ನೀರಿನ ಕೊರತೆ ಕುಕ್ಕುಟೋದ್ಯಮದ ಮೇಲೂ ಪ್ರಭಾವ ಬೀರಿರುವುದರಿಂದ ಕೋಳಿ ದರ ದುಪ್ಪಾಟ್ಟಾಗಿದೆ. ಹೀಗಾಗಿ ಚಿಕನ್ ಪ್ರಿಯರು ದುಬಾರಿ ಬೆಲೆ ನೀಡಿ ಚಿಕನ್ ಖರೀದಿಸುವುದು ಅನಿವಾರ್ಯವಾಗಿದೆ. ಮಳೆ ಕೊರತೆಯಿಂದ ಕೋಳಿ ಆಹಾರಗಳಾದ ಸೋಯಾ, ಮೈಸ್ ಮತ್ತಿತರ ಫಸಲುಗಳ ಪ್ರಮಾಣ ಕುಸಿತಗೊಂಡಿರುವುದರಿಂದ ಕೋಳಿ ದರ ಏರಿಕೆಯಾಗಿದೆ.

ಒಂದು ಕೆ.ಜಿಗೆ 100 ರಿಂದ 150ರೂ ಇದ್ದ ಕೋಳಿ ಬೆಲೆ ಇದೀಗ 300 ರೂ.ಗಳಿಗೆ ಏರಿಕೆಯಾಗಿದೆ. ಬೆಲೆ ಹೆಚ್ಚಳದ ಬಗ್ಗೆ ತಿಳಿಯದೆ ಚಿಕನ್ ಕೊಳ್ಳಲು ಹೋದವರಿಗೆ ಡಬಲ್ ಬೆಲೆ ಏರಿಕೆಯ ಬಿಸಿ ಮುಟ್ಟಿದೆ.

ರಾಜ್ಯದಲ್ಲಿ 35 ರಿಂದ 40 ಸಾವಿರ ಮಂದಿ ಕೋಳಿ ಸಾಕಾಣಿಕೆದಾರ-ರಿದ್ದು ಪ್ರತೀ ವಾರ 80 ಲಕ್ಷ ಕೋಳಿ ಉತ್ಪಾದನೆ ಮಾಡ್ತಾರೆ ಪ್ರತೀ ಕೆಜಿ ಕೋಳಿ ಉತ್ಪಾದನೆಗೆ ಹಿಂದೆ 60ರಿಂದ 70 ರೂಪಾಯಿ ಖರ್ಚಾಗುತ್ತಿತ್ತು. ಆದ್ರೀಗ ಪ್ರತೀ ಕೆಜಿ ಕೋಳಿ ಉತ್ಪಾದನೆಗೆ 98 ರಿಂದ 100 ರೂಪಾಯಿ ಖರ್ಚಾಗುತ್ತಿದೆಯಂತೆ.

ಇದರಿಂದ ಮಾರುಕಟ್ಟೆಯಲ್ಲಿ ಕೋಳಿಗೆ ಭಾರಿ ಡಿಮ್ಯಾಂಡ್ ಕಂಡುಬಂದಿದೆ. ಹೀಗಾಗಿ 300 ರೂ. ನೀಡಿದರೂ ಕೋಳಿ ಸಿಗೋದು ಅನುಮಾನವಾಗಿದೆ.

ನೆರೆ ರಾಜ್ಯಗಳಾದ ತಮಿಳುನಾಡು, ಕೇರಳ, ಆಂಧ್ರದಲ್ಲಿ ಕೋಳಿ ಉತ್ಪಾದನೆ ಕುಸಿತವಾಗಿರುವುದರಿಂದ ಅಲ್ಲಿಯೂ ಕೂಡ ಕೋಳಿ ಬೇಡಿಕೆ ಜಾಸ್ತಿ ಇದೆ, ಹೀಗಾಗಿ ಮತ್ತಷ್ಟು ದರ ಏರಿಕೆಯ ಬಿಸಿ ತಟ್ಟುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಪ್ರತಿಯೊಬ್ಬರಲ್ಲಿ ಜಲಸಾಕ್ಷರತೆ ಬೆಳೆಯಬೇಕು: ನ್ಯಾ.ಕೆ.ಎಸ್.ರೊಟ್ಟೇರ

ಹುಕ್ಕೇರಿ: ನಿಸರ್ಗ ಮತ್ತು ಪರಿಸರ ಹಾನಿಯಿಂದ ಶುದ್ಧ ನೀರಿನ ಅಭಾವ ಹೆಚ್ಚಿದ್ದು ಸಕಲ ಜೀವರಾಶಿಗಳಿಗೆ ಅಗತ್ಯವಾಗಿ ಬೇಕಿರುವ ಜೀವಜಲದ ಕುರಿತು ಪ್ರತಿಯೊಬ್ಬರಲ್ಲಿಯೂ ಜಲಸಾಕ್ಷರತೆ ಬೆಳೆಯಬೇಕಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಕೆ.ಎಸ್.ರೊಟ್ಟೇರ ಅಭಿಪ್ರಾಯಪಟ್ಟರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಶುಕ್ರವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ನಡೆದ ವಿಶ್ವ ಜಲ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಅತಿಯಾದ ಪ್ಲಾಸ್ಟಿಕ್ ಬಳಕೆ, ನೈಸರ್ಗಿಕ ಹಾನಿಯಿಂದ ನೀರು ಕಲುಷಿತವಾಗುತ್ತಿದೆ. ಇದು ಹಲವು ರೋಗಗಳಿಗೆ ಕಾರಣವಾಗಿದೆ. ಹಾಗಾಗಿ ನೀರು, ಪರಿಸರ ಶುದ್ಧವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದ್ದು ಮುಂದಿನ ಪೀಳಿಗೆಗೆ ಶುದ್ಧ ನೀರು ಸಂರಕ್ಷಿಸುವ ಹೊಣೆಗಾ-ರಿಕೆಯಿದೆ. ನೀರನ್ನು ಹಿತ-ಮಿತವಾಗಿ ಬಳಕೆ ಮಾಡಬೇಕು ಎಂದು ಅವರು ಕಿವಿಮಾತು ಹೇಳಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪವಿಭಾಗದ ಎಇಇ ವಿಜಯ ಮಿಶ್ರೀಕೋಟಿ ಅಧ್ಯಕ್ಷತೆ ವಹಿಸಿದ್ದರು. ಸಂಪನ್ಮೂಲ ವ್ಯಕ್ತಿ ಶ್ರೀಶೈಲ ಮಣಗುತ್ತಿ ಉಪನ್ಯಾಸ ನೀಡಿದರು.

ಸಿವಿಲ್ ನ್ಯಾಯಾಧೀಶ ಕೆ.ಅಂಬಣ್ಣಾ, ಅಪರ ಸರಕಾರಿ ನ್ಯಾಯವಾದಿ ಎ.ಸಿ.ಕರೋಶಿ, ಸಹಾಯಕ ಸರಕಾರಿ ಅಭಿಯೋಜಕ ಶೇಖರ ಭಡಗಾಂವೆ, ತಾಪಂ ಯೋಜನಾಧಿಕಾರಿ ಪ್ರಶಾಂತ ಮುನ್ನೋಳಿ, ಬಿಇಒ ಪ್ರಭಾವತಿ ಪಾಟೀಲ, ನ್ಯಾಯವಾದಿ ಸಂಘದ ಅಧ್ಯಕ್ಷ ಅನೀಸ್ ವಂಟಮೂರಿ, ಕಾರ್ಯದರ್ಶಿ ಎಸ್.ಜಿ.ನಧಾಪ್, ಸಹಾಯಕ ಎಂಜನೀಯರುಗಳಾದ ಬಿ.ಡಿ.ನಾಯಿಕವಾಡಿ, ಚೇತನ ಕಡಕೋಳ, ಸಂತೋಷ ಪಾಟೀಲ, ವಿಕಾಸ ಕೋಟಿ, ಸಿಬ್ಬಂದಿ ನಾಗಯ್ಯ ಹಿರೇಮಠ ಮತ್ತಿತರರು ಉಪಸ್ಥಿತರಿದ್ದರು.

ಜಾಕು ಇರಿದು ಪೈಲ್ವಾನನ ಭೀಕರ ಕೊಲೆ: ಆರೋಪಿಗಳನ್ನು ಬಂಧಿಸಿದ ಪೊಲೀಸರು

ಹುಬ್ಬಳ್ಳಿ: ಹುಬ್ಬಳ್ಳಿಯಲ್ಲಿ ಪೈಲ್ವಾನೊಬ್ಬನನ್ನು ಆತನ ಸ್ನೇಹಿತರೆ ಚಾಕುವಿನಿಂದ ಇರಿದು ಹಾಗೂ ಕಟ್ಟಿಗೆಯಿಂದ ಹಲ್ಲೆ ಮಾಡಿ ಭೀಕರವಾಗಿ ಕೊಲೆಗೈದಿರುವ ಘಟನೆ ಹುಬ್ಬಳ್ಳಿಯ ನಾಗಶೆಟ್ಟಿಕೊಪ್ಪದಲ್ಲಿ ನಡೆದಿದ್ದು, ಪ್ರಕಾಶ್ ಮಾನೆ ಎಂಬ ಪೈಲ್ವಾನನ್ನು ಬರ್ಬರವಾಗಿ ಕೊಲೆಗೈಯ್ಯಲಾಗಿದೆ.

ಚಾಕುವಿನಿಂದ ಹಿರಿದು ಕಟ್ಟಿಗೆಯಿಂದ ಹೊಡೆದು ಬರ್ಬರವಾಗಿ ಕೊಲೆಗೈಯ್ಯಲಾಗಿದೆ. ಸ್ನೇಹಿತರು ಕಿರಣ್ ಬಡಿಗೇರ ಹಾಗೂ ಸಂಗಮೇಶ್ ಎಂಬಾತನಿಂದ ಈ ಕೃತ್ಯ ನಡೆದಿದೆ. ಸ್ನೇಹಿತರು ಪೈಲ್ವಾನನನ್ನು ಯಾವ ಕಾರಣಕ್ಕೆ ಕೊಂದಿದ್ದಾರೆ ಎಂದು ಆರೋಪಿಗಳನ್ನು ವಶಕ್ಕೆ ಪಡೆದು ಇದೀಗ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಕೇಶವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಳಗಾವಿ-ಶಿಂದಿಕುರಬೇಟಗಳಲ್ಲಿ ಚಾಂಗದೇವ ಜಾತ್ರೆ ಮಾ.29ರಿಂದ ಆರಂಭ

ಬೆಳಗಾವಿ: ಸ್ಥಳೀಯ ಕಣಬರ್ಗಿ ರಸ್ತೆಯ ಚಾಂಗದೇವ (ಯಮನೂರಪ್ಪ) ದೇವರ ಜಾತ್ರೆ ಮಾರ್ಚ 29ರಿಂದ ಎಪ್ರೀಲ್ 3 ರವರೆಗೆ ವಿವಿಧ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ಮಾರ್ಚ 29ರಂದು ಶ್ರೀ ಚಾಂಗದೇವರಿಗೆ ಗಂಧಾಭಿಷೇಕ ಉತ್ಸವ ನಡೆಯುವದು. ಈ ನಿಮಿತ್ತ ವಾದ್ಯಮೇಳಗಳೊಂದಿಗೆ ಬೆ.11ಕ್ಕೆ ಪಲ್ಲಕ್ಕಿ ಉತ್ಸವ ಕಣಬರ್ಗಿಯ ಶ್ರೀ ಸಿದ್ಧೇಶ್ವರ ದೇವಸ್ಥಾನ ಹಾಗೂ ಆಟೋನಗರದ ಶ್ರೀ ಕರೆಮ್ಮ ದೇವಸ್ಥಾನಕ್ಕೆ ಭೇಟಿ ನೀಡುವದು. ಸಂಜೆ ದೇವಸ್ಥಾನಕ್ಕೆ ಆಗಮಿಸಿ ಗಂಧಾಭಿಷೇಕ ಉತ್ಸವ ನಡೆಯುವದು. ಮಾರ್ಚ 30ರಂದು ಮುಖ್ಯ ಜಾತ್ರೆ ನಡೆಯುವದು. ಭಕ್ತರು ಅಂದು ನೈವೆದ್ಯ ಅರ್ಪಿಸುವರು. ಮಧ್ಯಾಹ್ನ ಮಹಾಪ್ರಸಾದ ನಡೆಯುವದು.

ಮಾರ್ಚ 31ರಂದು ಸಂಜೆ 6 ಗಂಟೆಗೆ ಮಹಾಪೂಜೆ ಹಾಗೂ ಅಶ್ವಪೂಜೆ ನಡೆಯುವದು. ನಂತರ ಪಲ್ಲಕ್ಕಿ ಉತ್ಸವ ಹಾಗೂ ಸಂಜೆ 5 ಗಂಟೆಗೆ ಗುರುಪೂಜೆ ಇರುವದು. ಎಪ್ರೀಲ್ 1ರಂದು ಬೆಳಿಗ್ಗೆ ದಂಡವತ ಕಾರ್ಯಕ್ರಮ ಮತ್ತು ಸಂಜೆ ಗುರುಪೂಜೆ ನಡೆಯುವದು. ಎಪ್ರೀಲ್ 2ರಂದು ಮಹಾಪ್ರಸಾದ ನಡೆಯುವದು. ಸಂಜೆ ಪಲ್ಲಕ್ಕಿ ಪ್ರದಕ್ಷಿಣೆ, ಭಜನೆ ಕಾರ್ಯಕ್ರಮ ನಡೆಯುವುದು.

ಎ.3ರಂದು ಮಧ್ಯಾಹ್ನ ಗಾರಾಣೆ ಹಾಕುವ ಕಾರ್ಯಕ್ರಮ ಮತ್ತು ಸಂಜೆ ಭಂಡಾರ, ಹಬೀರ ಉತ್ಸವ ಹಾಗೂ ಸಂಜೆ ಮಹಾಪ್ರಸಾದ ನಡೆಯುವದು. ವಿವರಗಳಿಗೆ ಮೊ.ನಂ.9880532238 ಗೆ ಸಂಪರ್ಕಿಸಲು ಕೋರಲಾಗಿದೆ.

ಶಿಂದಿಕುರಬೇಟದಲ್ಲೂ ಜಾತ್ರೆ: ಗೋಕಾಕ ತಾಲೂಕಿನ ಶಿಂದಿಕುರಬೇಟ ಶ್ರೀ ಚಾಂಗದೇವ (ಯಮನೂರಪ್ಪ) ದೇವರ ಜಾತ್ರೆ ಮಾರ್ಚ 29 ಹಾಗೂ 30ರಂದು ಎರಡು ದಿನಗಳ ಕಾಲ ನಡೆಯಲಿದೆ.

ಮಾರ್ಚ 29ರಂದು ಗಂಧಾಭಿಷೇಕ ಉತ್ಸವ ನಡೆಯುವ ನಿಮಿತ್ತ ಮುತ್ತೈದೆಯರ ಕುಂಭ, ಆರತಿ ವಿವಿಧ ವಾದ್ಯ-ಮೇಳಗಳು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸುವದು. ದೇವಸ್ಥಾನಕ್ಕೆ ಆಗಮಿಸಿ ಗಂಧಾಭಿಷೇಕ ಉತ್ಸವ ನಡೆಯುವದು. ಸಂಜೆ 7ಕ್ಕೆ ಬೆಳಗಾವಿಯ ಶ್ರೀ ಚಾಂಗದೇವ ಸಾಂಸ್ಕೃತಿಕ ಸಂಘ ಇವರಿಂದ ಸಂಗೀತ ಕಾರ್ಯಕ್ರಮ ನಡೆಯುವದು. ನಂತರ ಮಹಾಪ್ರಸಾದ ನಡೆಯುವದು.

ಮಾರ್ಚ 30ರಂದು ಮುಖ್ಯ ಜಾತ್ರೆ ನಡೆಯುವದು. ಭಕ್ತರು ಅಂದು ನೈವೆದ್ಯ ಅರ್ಪಿಸುವರು. ಸಂಜೆ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುವದು. ವಿವರಗಳಿಗೆ ಮೊ.ನಂ. 9945920803 ಗೆ ಸಂಪರ್ಕಿಸಲು ಕೋರಲಾಗಿದೆ.

ಲೋಕಸಭಾ ಚುನಾವಣೆ: ದೇವಸ್ಥಾನ, ಮಂದಿರ/ಮಸೀದಿ/ಪ್ರಾರ್ಥನಾ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಕಾರ್ಯ ನಿರ್ಬಂಧ

ಬೆಳಗಾವಿ: ಭಾರತ ಚುನಾವಣಾ ಆಯೋಗದಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ದಿನಾಂಕ ನಿಗದಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಚುನಾವಣೆಯ ಮಾದರಿ ನೀತಿ ಸಂಹಿತೆಯು ಮಾರ್ಚ್ 16, 2024 ರಿಂದ ರಾಜ್ಯಾದ್ಯಂತ ಜಾರಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಯಾವುದೇ ರಾಜಕೀಯ ಪಕ್ಷಗಳು ಹಾಗೂ ದೇವಸ್ಥಾನ, ಮಂದಿರ/ ಚರ್ಚ/ಮಸೀದಿ ಹ